ಸಂಪುಟ : 8 ಸಂಚಿಕೆ :291 ಪುಟ : 4 ಬೆಲೆ : 3.00 ಶನಿವಾರ ಡಿಸೆಂಬರ್ 30, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 291 Pages : 4 Price : 3.00 Saturday December 30, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ


ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿ. 30 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 22ರಲ್ಲಿ ಅಮರೇಶ್ವರ ನಗರ, ಬನ್ನಿಕಟ್ಟಿ ಕೆಲವು ಭಾಗಗಳು, ವಾರ್ಡ್ ನಂ. 20, 21, 19 ರಲ್ಲಿ ಮಡಿವಾಳ ದೇವರ ದೇವಸ್ಥಾನ, ಕುಂಬಾರ ಓಣಿ, ಬಾಗಲಕೋಟೆ ಅವರ ಲೈನ್, ಅಂಬೇಡ್ಕರ್ ನಗರ, ಹನುಮಂತ ದೇವರ ಗುಡಿ ಲೈನ್, ಮೀನದ ಮಾರ್ಕೆಟ್, ವಾರ್ಡ್ ನಂ. 34, 35 ರಲ್ಲಿ ಸಿದ್ದು ಪಾಟೀಲ್ ಲೈನ್, ಆದರ್ಶ ನಗರ, ಹೂಲಿಯವರ ಲೈನ್, ದೊಡ್ಡಮನಿ ಸರ್ ಲೈನ್, ಶಿವಾನಂದ ಮಠ ಲೈನ್, ಒಂದನೇ ಕ್ರಾಸ್, ಮಸೂತಿ ಲೈನ್, ಈಶ್ವರ ಗುಡಿ ಲೈನ್, ಚಿದಾನಂದ ಮಠ 3ನೇ ಕ್ರಾಸ್, ವಾರ್ಡ್ ನಂ. 15, 16 ರಲ್ಲಿ ಶಹಾಪುರ ಪೇಟೆ, ಜವಳಗಲ್ಲಿ, ಮೀನದ ಮಾರ್ಕೆಟ್, ಗಾಂಧಿ ಸರ್ಕಲ್ ರಸ್ತೆ, ಮಹೇಂದ್ರಕರ್ ಸರ್ಕಲ್ ರಸ್ತೆ, ಬಸವೇಶ್ವರ ಗುಡಿ ಲೈನ್, ಗಣೇಶ ಗುಡಿ ಲೈನ್, ಶುದ್ಧ ನೀರಿನ ಘಟಕದ ಉಳಿದ ಕೆಲವು ಭಾಗಗಳು , ವಾರ್ಡ್ ನಂ. 11, 12 ರಲ್ಲಿ ಇರಾನಿ ಕಾಲೋನಿ, ಕರಿಯಮ್ಮ ಕಲ್ಲು ಬಡಾವಣೆ, ಗಾರ್ಡನ್ ಲೈನ್, ಗಾಣಿಗೇರ್ ಭವನದ ಲೈನ್, ಹನುಮಂತ ದೇವರ ಗುಡಿ ಲೈನ್, ನಾಲ್ಕನೇ ಕ್ರಾಸ್, 16ನೇ ನಂಬರ್ ಶಾಲೆ ಲೈನ್.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಪಾಟೀಲ ಇಂದು ಗದಗ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಡಿ. 30 ರಂದು ಮುಂಜಾನೆ 10 ಗಂಟೆಗೆ ಗದಗ ಮುನ್ಸಿಪಲ್ ಕಾಲೇಜು ಆವರಣದಲ್ಲಿ 15 ನೇ ಹಣಕಾಸು ಯೋಜನೆಯ ಕಾಮಗಾರಿಗಳಿಗೆ ಚಾಲನೆ ನೀಡುವರು.

ನಂತರ ಮುಂಜಾನೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಭವನದಲ್ಲಿ ತ್ರೈಮಾಸಿಕ ಕೆ.ಡಿ.ಪಿ.ಸಭೆ ನಡೆಸುವರು. ತದನಂತರ ಮಧ್ಯಾಹ್ನ 2 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕರ್ನಾಟಕ ಏಕೀಕರಣ ರೂವಾರಿ ದಿ. ಅಂದಾನಪ್ಪ ದೊಡ್ಡಮೇಟಿ ಅವರ ಸಮಾಧಿ ಅಭಿವೃದ್ಧಿ ಪಡಿಸುವ ಸಭೆಯಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 3 ಗಂಟೆಗೆ ರಸ್ತೆಯ ಮೂಲಕ ಗದಗನಿಂದ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿದೆ.

## ಲೋಕೋಪಯೋಗಿ ಇಲಾಖೆ ಸಚಿವ ಜಾರಕಿಹೊಳಿ ಇಂದು ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಅವರು ಡಿ. 30 ಶನಿವಾರದಂದು ಗದಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ರಾಣೆಬೆನ್ನೂರಿನಿಂದ ರಸ್ತೆಯ ಮೂಲಕ ಮಧ್ಯಾಹ್ನ 3 ಗಂಟೆಗೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಬಂಕಾಪೂರ-ಗದಗ ರಸ್ತೆ ಪರಿಶೀಲನೆ ನಡೆಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಇಂದು ತ್ರೈಮಾಸಿಕ ಕೆ.ಡಿ.ಪಿ. ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಡಿ. 30 ರಂದು ಮುಂಜಾನೆ 10.30 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ತ್ರೈಮಾಸಿಕ ಕೆ.ಡಿ.ಪಿ. ಸಭೆ ಜರುಗಲಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಎಲ್ ಪಿಜಿ ಗ್ಯಾಸ್ ಹೊಂದಿರುವ ಫಲಾನುಭವಿಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಿ. 31 ರೊಳಗಾಗಿ ಗ್ಯಾಸ್ ಏಜೆನ್ಸಿಗಳಿಗೆ ಹೋಗಿ ಇ-ಕೆವೈಸಿ ಮಾಡಿಸಿದರೆ ಮಾತ್ರ ಸಬ್ಸಿಡಿ ಹಣ ಪಾವತಿಯಾಗುತ್ತದೆ ಮತ್ತು ಸಿಲಿಂಡರ್ ಸರಬರಾಜು ಮಾಡಲಾಗುತ್ತದೆ ಎಂಬ ವದಂತಿ ಮತ್ತು ಇ-ಕೆವೈಸಿ ಕಾರ್ಯಕ್ಕೆ ಹಣ ನೀಡಬೇಕೆಂಬ ವದಂತಿ ಸಾರ್ವಜನಿಕರ ವಲಯದಲ್ಲಿ ಗೊಂದಲ ಸೃಷ್ಟಿಗೆ ಕಾರಣವಾಗಿದೆ.

ಮೇಲ್ಕಂಡ ವಿಷಯವು ಕೇವಲ ವದಂತಿಯಾಗಿದ್ದು, ಇ-ಕೆವೈಸಿ ಮಾಡಿಸಲು ಕೇಂದ್ರ ಸರ್ಕಾರವು ಯಾವುದೇ ಕೊನೆಯ ದಿನಾಂಕವನ್ನು ನಿಗದಿಪಡಿಸಿರುವುದಿಲ್ಲ. ಹಾಗೂ ಇ-ಕೆವೈಸಿ ಮಾಡಿಸುವುದಕ್ಕೆ ಯಾವುದೇ ಶುಲ್ಕ ನಿಗದಿಪಡಿಸಿರುವುದಿಲ್ಲ. ಅದು ಉಚಿತವಾಗಿರುತ್ತದೆ. ಇ-ಕೆವೈಸಿ ಮಾಡಿಸುವುದು ನಿರಂತರ ಪ್ರಕ್ರಿಯೆಯಾಗಿದ್ದು, ಉಜ್ವಲ ಯೋಜನೆಯ ಗ್ಯಾಸ್ ಸಂಪರ್ಕ ಪಡೆದಿರುವವರು ಇ-ಕೆವೈಸಿ ಮಾಡಿಸಲು ಮೊದಲ ಆದ್ಯತೆಯಾಗಿ ನೀಡಬೇಕಾಗಿದೆ. ಉಳಿದಂತೆ ಗ್ಯಾಸ್ ಸಂಪರ್ಕ ಹೊಂದಿರುವವರು ಏಜೆನ್ಸಿಯ ಕರ್ತವ್ಯದ ಅವಧಿಯಲ್ಲಿ ತೆರಳಿ ಇ-ಕೆವೈಸಿ (ಆಧಾರ್ ಕಾರ್ಡ್ ಸಹಿತ) ಮಾಡಿಸಬಹುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಡಳಿತ ಭವನದಲ್ಲಿ 'ವಿಶ್ವ ಮಾನವ ದಿನಾಚರಣೆ-2023'

# ಕುವೆಂಪು ಬದುಕು ಸರ್ವರಿಗೂ ಅನುಕರಣೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನದ ನಿಮಿತ್ತ ಹಮ್ಮಿಕೊಳ್ಳಲಾಗಿದ್ದ 'ವಿಶ್ವ ಮಾನವ ದಿನಾಚರಣೆ' ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಉದ್ಘಾಟಿಸಿದರು.

ಹಿರಿಯ ಸಾಹಿತಿಗಳಾದ ಅಂದಾನಪ್ಪ ವಿಭೂತಿ ರಾಷ್ಟ್ರಕವಿ ಕುವೆಂಪುರವರ ಜೀವನ ಮತ್ತು ಸಂದೇಶ ಕುರಿತು ಉಪನ್ಯಾಸ ನೀಡಿ ಮಾತನಾಡುತ್ತಾ, ವಿಶ್ವಕ್ಕೆ ಮಾನವ ಸಂದೇಶವನ್ನು ಕೊಟ್ಟ ರಾಷ್ಟ್ರಕವಿ ಕುವೆಂಪು ಅವರ ಸಾಹಿತ್ಯ ಕೃಷಿಯ ಬದುಕು ಅವಲೋಕನ ಮಾಡಬೇಕಾಗಿದೆ.

ರಾಷ್ಟ್ರಕವಿ ಕುವೆಂಪುರವರು 1904ರ ಡಿಸೆಂಬರ್ 29ರಂದು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಕುಪ್ಪಳ್ಳಿಯಲ್ಲಿ ಜನಿಸಿದರು. ತಂದೆ ವೆಂಕಟಪ್ಪ ಗೌಡರು, ತಾಯಿ ಸೀತಮ್ಮ. ತಮ್ಮ ಪ್ರಾಥಮಿಕ ಶಿಕ್ಷಣವನ್ನು ತೀರ್ಥಹಳ್ಳಿಯಲ್ಲಿ ಆರಂಭಿಸಿದ ಕುವೆಂಪುರವರು ನಂತರ ಪ್ರೌಢಶಾಲೆಯಿಂದ ಎಂ.ಎ. ಪದವಿಯವರೆಗೂ ಮೈಸೂರಿನಲ್ಲಿ ಓದಿದರು. ನಂತರ 1929ರಲ್ಲಿ ಪ್ರಾಧ್ಯಾಪಕರಾಗಿ ಮೈಸೂರಿನ ಮಹಾರಾಜಾ



ಕಾಲೇಜನ್ನು ಸೇರಿದ ಅವರು, 1955ರಲ್ಲಿ ಅದೇ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿ ನಂತರ ಉಪಕುಲಪತಿಯಾಗಿ ನಿವೃತ್ತರಾದರು. ರಾಷ್ಟ್ರಕವಿ ಕುವೆಂಪು ಅವರ ಬದುಕು ಸರ್ವರಿಗೂ ಅನುಕರಣೀಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಕುವೆಂಪು ಅವರ ಜನ್ಮದಿನದ ನಿಮಿತ್ತ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ, ಪ್ರೊ. ಕೆ.ಎಚ್. ಬೇಲೂರ, ಮೌನೇಶ ಬಡಿಗೇರ, ವಿವಿಧ ಇಲಾಖೆಯ ಅಧಿಕಾರಿಗಳು, ಸಾಹಿತಿಗಳು ಪಾಲ್ಗೊಂಡಿದ್ದರು.

ಪಂಡಿತ ವೆಂಕಟೇಶ ಅಲ್ಕೋಡ ನಾಡಗೀತೆ ಪ್ರಸ್ತುತಪಡಿಸಿದರು. ಬಾಹುಬಲಿ ಜೈನರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ.ಬಿ ವಂದಿಸಿದರು.

> ಕುವೆಂಪು ಅವರು ಬರೆದ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯಕ್ಕೆ ಭಾರತೀಯ ಜ್ಞಾನಪೀಠ ಪ್ರಶಸ್ತಿ ಲಭಿಸಿತು. ಕುವೆಂಪುರವರು ನಿಸರ್ಗ ಪ್ರೇಮ, ಆಧ್ಯಾತ್ಮಿಕತೆ, ವೈಚಾರಿಕತೆ, ದೇಶಪ್ರೇಮವನ್ನು ಮೈಗೂಡಿಸಿಕೊಂಡಿದ್ದರು. ಮನುಜಮತ, ವಿಶ್ವ ಪಥ, ಸರ್ವೋದಯ, ಸಮನ್ವಯ, ಪೂರ್ಣದೃಷ್ಟಿ ಈ ಪಂಚಮಂತ್ರಗಳ ದೃಷ್ಟಿಕೋನ ಹೊಂದಿದವರಾಗಿದ್ದರು ಎಂದು ವಿವರಿಸಿದ ಅಂದಾನಪ್ಪ ವಿಭೂತಿ, ಇಂದಿನ ವಿದ್ಯಾರ್ಥಿಗಳು ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ಕುವೆಂಪು ಅವರ ಜನ್ಮಸ್ಥಳಕ್ಕೆ ಭೇಟಿ ನೀಡಿ ಅಧ್ಯಯನ ನಡೆಸಬೇಕೆಂದು ಹಿರಿಯ ಸಾಹಿತಿ ಅಂದಾನಪ್ಪ ವಿಭೂತಿ ನುಡಿದರು.

### ವಿದ್ಯುತ್ ಗುತ್ತಿಗೆದಾರರ ಸಂಘದ ದಿನಚರಿ, ಕ್ಯಾಲೆಂಡರ್ ಬಿಡುಗಡೆ

# ಸಂಘದ ಅಭಿವೃದ್ಧಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಂಘವು ಶತಮಾನೋತ್ಸವವನ್ನು ಕಂಡಿದ್ದರೂ ರಾಜ್ಯದ ಅನುಮತಿ ವಿದ್ಯುತ್ ಗುತ್ತಿಗೆದಾರರ ಸಂಘ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದೆ. ಅದನ್ನು ಸರಿಪಡಿಸುವಲ್ಲಿ ಸಂಘವು ಕಾರ್ಯೋನ್ಮುಖವಾಗಲಿದ್ದು, ಇದಕ್ಕಾಗಿ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ರಮೇಶ ವಿನಂತಿಸಿದರು.

ಶುಕ್ರವಾರ ನಗರದ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ ಬೆಂಗಳೂರು, ಜಿಲ್ಲಾ ಸಮಿತಿ ಆಶ್ರಯದಲ್ಲಿ 2024ನೇ ಸಾಲಿನ ತಾಂತ್ರಿಕ ದಿನಚರಿ



ಹಾಗೂ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.


ದಕ್ಷಿಣದ 5 ರಾಜ್ಯಗಳನ್ನು ಒಳಗೊಂಡಂತೆ ಸೌಥ್ ಇಂಡಿಯನ್ ಇಲೆಕ್ಟ್ರಿಷಿಯನ್ ಫೆಡರೇಶನ್ (ವಿದ್ಯುತ್ ಗುತ್ತಿಗೆದಾರರ ಸಂಘ) ಸಂಕ್ರಾಂತಿ ನಂತರ ಪೂರ್ಣ ಪ್ರಮಾಣದಲ್ಲಿ ಅಸ್ತಿತ್ವಕ್ಕೆ ಬರಲಿದೆ ಎಂದವರು ತಿಳಿಸಿದರು.

ವೀರೇಶ್ವರ ಪುಣ್ಯಾಶ್ರಮದ ಪೂಜ್ಯ ಶ್ರೀ ಕಲ್ಲಯ್ಯಜ್ಜನವರಿಗೆ ಬೆಳ್ಳಿ ಕಿರೀಟ ಹಾಗೂ 1 ಲಕ್ಷ ರೂ. ದೇಣಿಗೆ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಅಂಧ-ಅನಾಥ ಮಕ್ಕಳಿಗೆ ದಾರಿದೀಪವಾದ ವೀರೇಶ್ವರ ಪುಣ್ಯಾಶ್ರಮ ಇತಿಹಾಸ ಕುರಿತು ಸಾಕ್ಷ್ಯಚಿತ್ರ ಪ್ರದರ್ಶಿಸಲಾಯಿತು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಶಂಕ್ರಣ್ಣ ಸಂಕಣ್ಣವರ ತಂಡದಿಂದ ಜನಪದ ಗೀತೆಗಳು ಜರುಗಿದವು.

ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಕಿಂದ್ರಿ, ಪ್ರಮುಖರಾದ ಶಿವಾನಂದ ಬಾಲಪ್ಪನವರ, ಸಿ.ವಿ. ಮಲ್ಲಿಕಾರ್ಜುನ, ಸೋಮಕುಂಡಲ ರೆಡ್ಡಿ, ಎಂ.ಜೆ. ನಾಗಮಂಗಲಂ, ಕೆ.ವಿ. ನಾಗರಾಜ, ಶ್ರೀಕಾಂತ ಸಸಾಲಟ್ಟಿ, ಭಾನಾವತಿ ರಾಮಚಂದ್ರ, ಅಪ್ಪಣ್ಣ ಇನಾಮತಿ, ಪ್ರಕಾಶ ಅಂಗಡಿ, ವಿಜಯಕುಮಾರ ಗುಡ್ಡದ, ನಾರಾಯಣ, ಶಿವರಾಜ ಐ.ಬಿ., ಆನಂದ ಹಾದಿಮನಿ, ಎಂ. ಕೃಷ್ಣ, ಈಶ್ವರಪ್ಪ, ಟಿ.ಎ. ಚಂದ್ರಪ್ಪ ಇತರರು ಉಪಸ್ಥಿತರಿದ್ದರು. ರಾಜ್ಯದ 203 ತಾಲೂಕುಗಳಿಂದ ಹಾಗೂ ಜಿಲ್ಲಾ ಕೇಂದ್ರಗಳಿಂದ ಆಗಮಿಸಿದ್ದ ವಿದ್ಯುತ್ ಗುತ್ತಿಗೆದಾರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ದಕ್ಷಿಣ ಭಾರತ ವಲಯ ಮಟ್ಟಕ್ಕೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಡಿ.27ರಂದು ಜರುಗಿದ ರಾಜ್ಯ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ತಾಲೂಕಿನ ರಾಮಗಿರಿ ಗ್ರಾಮದ ಜಿ.ಎಫ್. ಉಪನಾಳ ಸರಕಾರಿ ಪ್ರೌಢಶಾಲೆಯ ವಿನೋದಗೌಡ ಪಾಟೀಲ, ರವಿ ತಳವಾರ ವಿದ್ಯಾರ್ಥಿಗಳ ತಂಡ ದ್ವಿತೀಯ ಸ್ಥಾನ ಪಡೆದು ದಕ್ಷಿಣ ಭಾರತ ವಲಯ ಮಟ್ಟಕ್ಕೆ ಆಯ್ಕೆಯಾಗಿದೆ. ವಿದ್ಯಾರ್ಥಿಗಳು ಆಧುನಿಕ ಕೃಷಿ ಪದ್ಧತಿಯ ವಿಷಯಾಧಾರಿತ ಸ್ಮಾರ್ಟ್ ಫಾರ್ಮ್ ಹೌಸ್ ಮಾದರಿಯನ್ನು ಅತ್ಯಂತ ವಿಶೇಷ ಮತ್ತು ವೈಜ್ಞಾನಿಕತೆಯೊಂದಿಗೆ ನಿರ್ಮಿಸಿ ಪ್ರದರ್ಶಿಸಿದ್ದರು.

ವಿದ್ಯಾರ್ಥಿಗಳಿಗೆ ಮುಖ್ಯೋಪಾಧ್ಯಾಯ ಜೆ.ಎಸ್. ಹಿರೇಮಠ ಶಿಕ್ಷಕ ಎಲ್.ಬಿ. ಮುದೇನವರ ಸೇರಿದಂತೆ ಶಿಕ್ಷಕ ವೃಂದ ಮಾರ್ಗದರ್ಶನ ನೀಡಿದೆ. ವಿದ್ಯಾರ್ಥಿಗಳ ಸಾಧನೆಗೆ ಬಿಇಓ ಜಿ.ಎಂ. ಮುಂದಿನಮನಿ ಸಂತಸ ವ್ಯಕ್ತಪಡಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಎಸ್.ಎಫ್.ಸಿ. 24.10 % , 7.25 %, 5 % ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಜನಾಂಗದವರು, ಸಾಮಾನ್ಯ ಹಾಗೂ ವಿಕಲಚೇತನರ ಕಲ್ಯಾಣ ಯೋಜನೆ ಅನುದಾನದಲ್ಲಿ ವ್ಯಕ್ತಿಗತ ಸಂಬಂಧಿಸಿದ ಕಾರ್ಯಕ್ರಮ ಸೌಲಭ್ಯ ಪಡೆಯಲು ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ರಹವಾಸಿಯಾಗಿದ್ದು, ಆಸಕ್ತಿಯುಳ್ಳ ಅರ್ಹ ಫಲಾನುಭವಿಗಳು ಸಂಬಂಧಿಸಿದ ಸಕ್ಷಮ ಪ್ರಾಧಿಕಾರದಿಂದ ಪಡೆದ ಚಾಲ್ತಿ ಇರುವ ಅಗತ್ಯ ದಾಖಲೆಗಳೊಂದಿಗೆ ಪಟ್ಟಣ ಪಂಚಾಯತಿಯಲ್ಲಿ ನಿಗದಿಪಡಿಸಿದ ಅರ್ಜಿ ನಮೂನೆ ಪಡೆದು ಎಲ್ಲ ದಾಖಲೆಗಳೊಂದಿಗೆ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತಿ ಶಿರಹಟ್ಟಿ ಈ ವಿಳಾಸಕ್ಕೆ ಜನವರಿ 12 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತ್ ಕಾರ್ಯಾಲಯದ ದೂರವಾಣಿ ಸಂಖ್ಯೆ 08487 295009 ಸಂಪರ್ಕಿಸಬಹುದಾಗಿದೆ.

## ಲೋಕಸಭೆ ಚುನಾವಣೆಯಲ್ಲಿ ಎಲ್ಲ ಕ್ಷೇತ್ರಗಳಿಂದಲೂ ಸ್ಪರ್ಧೆ




■ವಿಜಯಸಾಕ್ಷಿ ಸುದ್ದಿ, ಗದಗ

ಮುಂಬರುವ 2024ರ ಲೋಕಸಭಾ ಚುನಾವಣೆಯಲ್ಲಿ ಕೆಆರ್‌ಎಸ್ ಪಕ್ಷದಿಂದ ರಾಜ್ಯದ 28 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳು ಕಣಕ್ಕಿಳಿಯಲಿದ್ದಾರೆ ಎಂದು ಕೆಆರ್‌ಎಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೀರನಗೌಡ ಮೂಗನೂರ ಮಾಹಿತಿ ನೀಡಿದರು.


ಅವರು ಶುಕ್ರವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿ, ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ 185 ಕ್ಷೇತ್ರಗಳಲ್ಲಿ ಕೆಆರ್‌ಎಸ್ ಪಕ್ಷದ ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಲೋಕಸಭೆ ಚುನಾವಣೆಯಲ್ಲಿ ರಾಜ್ಯದ ಎಲ್ಲ ಕ್ಷೇತ್ರಗಳಿಂದಲೂ ಅಭ್ಯರ್ಥಿಗಳು ಕಣಕ್ಕಿಳಿಯಲಿದ್ದಾರೆ ಎಂದರು.

ಕೆಆರ್‌ಎಸ್ ಪಾರ್ಟಿಯಿಂದ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಆಸಕ್ತಿಯುಳ್ಳವರು ಇದೇ 6 ಮತ್ತು 7ರಂದು ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ನಡೆಯುವ ಸಂದರ್ಶನದಲ್ಲಿ ಪಾಲ್ಗೊಳ್ಳಬಹುದಾಗಿದೆ. ಪಕ್ಷದ ಕಾರ್ಯಕರ್ತರಿಗೆ 5 ಸಾವಿರ ರೂ. ಹಾಗೂ ಹೊಸಬರಿಗೆ 10 ಸಾವಿರ ರೂ. ಸಂದರ್ಶನ ಶುಲ್ಕ ನಿಗದಿಪಡಿಸಲಾಗಿದೆ ಎಂದರು.

ಕೆಆರ್‌ಎಸ್ ಪಕ್ಷ ಪ್ರಾಮಾಣಿಕತೆಗೆ ಹೆಸರಾದ ಪಕ್ಷವಾಗಿದೆ. ಜನಪರ ಕಾಳಜಿ ಉಳ್ಳವರು, ಕನ್ನಡ ಪರ ಚಿಂತನೆ ಹೊಂದಿದವರು, ದೇಣಿಗೆ ಮೂಲಕ ಚುನಾವಣೆ ಖರ್ಚು-ವೆಚ್ಚಗಳನ್ನು ಭರಿಸುವವರು, ಸಂವಿಧಾನದಲ್ಲಿ ನಂಬಿಕೆ ಹೊಂದಿದವರು ಚುನಾವಣೆಗೆ ಸ್ಪರ್ಧಿಸಬಹುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ನೀಲಪ್ಪ ಕಟಗಿ, ಫಕೀರಗೌಡ ತಮ್ಮನಗೌಡ್ರ, ಖಾದರಸಾಬ, ಸೈಯ್ಯದ ಸುಲೇಮಾನ ಬೆಟಗೇರಿ, ದೇವರಾಜ ಅಂಗಡಿ ಮುಂತಾದವರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ 1 ಸಾವಿರ ಕೋಟಿ ರೂ. ಕ್ರಿಯಾ ಯೋಜನೆ ರೂಪಿಸಿ: ಸಿಎಂ ಸಿದ್ದರಾಮಯ್ಯ ಸೂಚನೆ



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ 1 ಸಾವಿರ ಕೋಟಿ ರೂಪಾಯಿ ಕ್ರಿಯಾ ಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಸತಿ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದ ಸಿದ್ದರಾಮಯ್ಯ, ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ 1 ಸಾವಿರ ಕೋಟಿ ರೂ. ಕ್ರಿಯಾ ಯೋಜನೆ ರೂಪಿಸಬೇಕು. ಕ್ರಿಯಾ ಯೋಜನೆ ತಯಾರಿಸುವ ಸಂದರ್ಭದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ನೆಲೆಸಿರುವ ಪ್ರದೇಶಗಳನ್ನು ಗುರುತಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ ಸಾವಿರ ಕೋಟಿ ರೂ.ಗಳ ಕ್ರಿಯಾ ಯೋಜನೆ ರೂಪಿಸಬೇಕು. ಈ ಕ್ರಿಯಾ ಯೋಜನೆ ತಯಾರಿಸುವ ಸಂದರ್ಭದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ನೆಲೆಸಿರುವ ಪ್ರದೇಶಗಳನ್ನು ಗುರುತಿಸಿ, ಅನುದಾನ ಹಂಚಿಕೆ ಮಾಡಬೇಕು.

ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ನೀಡುತ್ತಿದ್ದ ವಿದ್ಯಾರ್ಥಿ ವೇತನ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವೇ ಇದನ್ನು ಭರಿಸಲು ತೀರ್ಮಾನಿಸಿದ್ದು, 6.4 ಲಕ್ಷ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಬಿಡುಗಡೆಗೆ ಸಿದ್ಧವಾಗಿದೆ. ಆಯವ್ಯಯದಲ್ಲಿ 60 ಕೋಟಿ ರೂ. ನಿಗದಿಯಾಗಿದ್ದು, ಇಲಾಖೆಗೆ ಲಭ್ಯ ಅನುದಾನದಲ್ಲಿಯೇ ಮರುಹಂಚಿಕೆ ಮಾಡಿ ಹೆಚ್ಚುವರಿ 40 ಕೋಟಿ ಭರಿಸಬೇಕು ಎಂದು ಹೇಳಿದ್ದಾರೆ.

ಅಲ್ಪಸಂಖ್ಯಾತರಿಗೆ ಸವಲತ್ತು ವಿತರಿಸುವ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಭಾರಿ ಪ್ರಮಾಣದಲ್ಲಿ ಅರ್ಜಿ ಸ್ವೀಕೃತವಾಗಿದ್ದು, ಮುಂದಿನ ವರ್ಷ ಇದಕ್ಕೆ ಹೆಚ್ಚಿನ ಅನುದಾನ ಒದಗಿಸಲಾಗುವುದು ಎಂದರು.

ವಿವಿಧ ವಸತಿ ಯೋಜನೆಗಳಡಿ ಪ್ರಸಕ್ತ ಸಾಲಿನಲ್ಲಿ 3 ಲಕ್ಷ ಮನೆಗಳ ನಿರ್ಮಾಣದ ಗುರಿಗೆದುರಾಗಿ ಈ ವರೆಗೆ 1.31 ಲಕ್ಷ ಮನೆಗಳ ನಿರ್ಮಾಣ ಪೂರ್ಣಗೊಂಡಿದೆ. ಮುಕ್ತಾಯದ ಹಂತದಲ್ಲಿರುವ 1.6 ಲಕ್ಷ ಮನೆಗಳನ್ನು ಮಾರ್ಚ್ ಒಳಗೆ ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ.

ಈ ಬಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಸಂಬಂಧಿಸಿದ ಎಂಜಿನಿಯರುಗಳ ಸಭೆ ನಡೆಸಿ, ಲಿಂಟೆಲ್ ಮತ್ತು ಛಾವಣಿ ಹಂತದಲ್ಲಿರುವ ಸುಮಾರು ಒಂದೂವರೆ ಲಕ್ಷಕ್ಕೂ ಹೆಚ್ಚು ಮನೆಗಳನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು.

### ಆಯುಷ್ಮಾನ್ ಭಾರತ ಪ್ರಧಾನಮಂತ್ರಿ ಜನಾರೋಗ್ಯ ನ್ಯಾಷನಲ್ ಪೋರ್ಟಲ್ ಬಗ್ಗೆ ವಿಶೇಷ ಲೇಖನ

# ಆರೋಗ್ಯ ಚಿಕಿತ್ಸೆಗೆ ಆಯುಷ್ಮಾನ್ ಭಾರತ ಕಾರ್ಡ್

ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ನ್ಯಾಷನಲ್ ಪೋರ್ಟಲ್‌ಗೆ ನೂತನ ಹೆಲ್ತ್ ಕಾರ್ಡ್‌ಗಳನ್ನು ಸಂಯೋಜನೆಗೊಳಿಸಲಾಗಿದ್ದು, ರಾಜ್ಯದ ಬಿಪಿಎಲ್ ಕಾರ್ಡುದಾರರು ದೇಶದ ಇತರೆ ರಾಜ್ಯಗಳಲ್ಲಿ ಹೆಲ್ತ್ ಕಾರ್ಡ್‌ನ ಅಡಿ ಚಿಕಿತ್ಸೆ ಪಡೆಯಬಹುದಾಗಿದೆ.

ರಾಜ್ಯದಲ್ಲಿರುವ ಒಟ್ಟು 5.09 ಕೋಟಿ ಫಲಾನುಭವಿಗಳಿಗೆ ಮುಂದಿನ 6 ತಿಂಗಳ ಒಳಗಾಗಿ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ, ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಕಾರ್ಡ್ ಸೃಜನೆ ಮತ್ತು ವಿತರಣಾ ಗುರಿಯನ್ನು ಹೊಂದಲಾಗಿದೆ.

ಗದಗ ಜಿಲ್ಲೆಯಲ್ಲಿ 9,41,427 ನಿಗದಿಪಡಿಸಿದ ಫಲಾನುಭವಿಗಳಿದ್ದು, ಈ ಪೈಕಿ 3,42,290 ಫಲಾನುಭವಿಗಳು ಈಗಾಗಲೇ ತಮ್ಮ ಹೆಸರುಗಳನ್ನು ನೊಂದಾಯಿಸಿಕೊಂಡು ಕಾರ್ಡ್ ಪಡೆಯುವ ಮೂಲಕ ಶೇ.36ರಷ್ಟು ಪ್ರಗತಿಯಾಗಿದೆ. ಈ ಯೋಜನೆಯ ಪ್ರಯೋಜನವನ್ನು ಜನಸಾಮಾನ್ಯರಿಗೆ ತಿಳಿಸಿ ಜಾಗೃತಿ ಮೂಡಿಸುವ ಮೂಲಕ ಅರ್ಹ ಎಲ್ಲಾ ಫಲಾನುಭವಿಗಳು ನಿಗದಿತ ದಾಖಲೆ ನೀಡಿ ಕಾರ್ಡ್ ಪಡೆದು ಉಚಿತ ಆರೋಗ್ಯ ಸೌಲಭ್ಯ ತಮ್ಮದಾಗಿಸಿಕೊಳ್ಳಬೇಕು ಎಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಡಿಸೆಂಬರ್ 15ರಂದು ಜಿಲ್ಲಾಡಳಿತ ಭವನದಲ್ಲಿ ನಡೆದ ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಸಮರ್ಪಕ ಅನುಷ್ಠಾನ ಸಭೆಯಲ್ಲಿ ತಿಳಿಸಿದರು.

ರಾಜ್ಯದ ಎಲ್ಲ ನಿವಾಸಿಗಳಿಗೆ ಆರೋಗ್ಯ ಕರ್ನಾಟಕ ಎಂಬ ಸಾರ್ವತ್ರಿಕ ಆರೋಗ್ಯ ರಕ್ಷಣಾ ಯೋಜನೆಯನ್ನು ಕರ್ನಾಟಕ ಸರ್ಕಾರವು ಮಾರ್ಚ್ 02-2018ರಿಂದ ಅನುಷ್ಠಾನಗೊಳಿಸುತ್ತಿತ್ತು. ನಂತರ ಭಾರತ ಸರ್ಕಾರವು ಆಯುಷ್ಮಾನ್ ಭಾರತ್ ಯೋಜನೆಯನ್ನು ಜಾರಿಗೊಳಿಸಿತು. ಈ ಎರಡೂ ಯೋಜನೆಗಳ ಉದ್ದೇಶ, ವ್ಯಾಪ್ತಿಗಳಲ್ಲಿ ಹೋಲಿಕೆ ಇರುವುದರಿಂದ ಎರಡೂ ಯೋಜನೆಗಳನ್ನು ಸಂಯೋಜಿಸಿ 'ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ' ಎಂಬ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಚಿಕಿತ್ಸೆಗಳು: ಸಾಮಾನ್ಯ ದ್ವಿತೀಯ ಹಂತದ 291 ಚಿಕಿತ್ಸಾ ವಿಧಾನಗಳು, ಕ್ಲಿಷ್ಟಕರ ದ್ವಿತೀಯ ಹಂತದ 254 ಚಿಕಿತ್ಸಾ ವಿಧಾನಗಳು, ಮಾರಣಾಂತಿಕ ಕಾಯಿಲೆಗಳಾದ ಹೃದಯರೋಗ, ಕ್ಯಾನ್ಸರ್, ನರರೋಗ, ಮೂತ್ರಪಿಂಡದ ಕಾಯಿಲೆ, ನವಜಾತ ಶಿಶುಗಳ ಕಾಯಿಲೆ ಮುಂತಾದ ತೃತೀಯ ಹಂತದ 900 ಚಿಕಿತ್ಸಾ ವಿಧಾನಗಳು ಹಾಗೂ 169 ತುರ್ತು ಚಿಕಿತ್ಸೆಗಳು ಮತ್ತು 36 ಉಪಚಿಕಿತ್ಸಾ ವಿಧಾನಗಳು ಸೇರಿ ಒಟ್ಟು 1650 ಚಿಕಿತ್ಸೆಗಳು ಲಭ್ಯ. 169 ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ ನೇರವಾಗಿ ನೋಂದಾಯಿತ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬಹುದು.

ಆರೋಗ್ಯ ಕಾರ್ಡ್: ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ಎಬಿ-ಎಆರ್‌ಕೆ ಕಾರ್ಡ್‌ನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ರೂ.10 ಶುಲ್ಕದೊಂದಿಗೆ ನೀಡಲಾಗುತ್ತದೆ.




**ಅರ್ಹತೆ ಹಾಗೂ ಚಿಕಿತ್ಸಾ ಮೊತ್ತ**

ಬಿಪಿಎಲ್ ಪಡಿತರ ಕಾರ್ಡ್ ಹೊಂದಿರುವವರು ಹಾಗೂ ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಲ್ಲಿ ನೋಂದಾಯಿತವಾಗಿರುವ ಫಲಾನುಭವಿಗಳಿಗೆ ಒಂದು ವರ್ಷಕ್ಕೆ ರೂ.5 ಲಕ್ಷಗಳವರೆಗೆ ಉಚಿತ ಚಿಕಿತ್ಸೆ ಲಭ್ಯ. ಎಪಿಎಲ್ ಕಾರ್ಡುದಾರರು ಅಥವಾ ಬಿಪಿಎಲ್ ಕಾರ್ಡು ಹೊಂದಿಲ್ಲದವರಿಗೆ ಸಹ-ಪಾವತಿ ಆಧಾರದ ಮೇಲೆ ಸರ್ಕಾರಿ ಪ್ಯಾಕೇಜ್ ದರದ ಶೇ.30ರಷ್ಟು ಚಿಕಿತ್ಸಾ ವೆಚ್ಚ ಲಭ್ಯವಿದ್ದು, ವಾರ್ಷಿಕ ಮಿತಿ ಪ್ರತಿ ಕುಟುಂಬಕ್ಕೆ ರೂ.1.50 ಲಕ್ಷ ಇರುತ್ತದೆ. ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಹಾಜರುಪಡಿಸಿ ಚಿಕಿತ್ಸೆ ಪಡೆದುಕೊಳ್ಳಬಹುದು.

ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಸೇವಾ ಸಿಂಧು ಕೇಂದ್ರಗಳಲ್ಲಿ ರೂ. 35 ಶುಲ್ಕದೊಂದಿಗೆ ಎಬಿ-ಎಆರ್‌ಕೆ ಕಾರ್ಡ್ ನೀಡಲಾಗುತ್ತದೆ. ಆಧಾರ್ ಕಾರ್ಡ್ ಮತ್ತು ಪಡಿತರ ಕಾರ್ಡ್‌ಗಳನ್ನು ಹಾಜರುಪಡಿಸಿ ಆರೋಗ್ಯ ಕಾರ್ಡ್ ಪಡೆಯಬಹುದು.

ಪ್ಲೇ ಸ್ಟೋರ್‌ನಲ್ಲಿ ಆಯುಷ್ಮಾನ್ ಭಾರತ ಆ್ಯಪ್: ಆಯುಷ್ಮಾನ್ ಭಾರತ ಕಾರ್ಡ್ ಪಡೆಯಲು ಕಾರ್ಡ್‌ದಾರರು ತಮ್ಮ ಸ್ಮಾರ್ಟ್‌ಫೋನಿನ ಗೂಗಲ್ ಪ್ಲೇ ಸ್ಟೋರ್‌ನಲ್ಲಿ ಆಯುಷ್ಮಾನ್ ಭಾರತ ಅಪ್ಲಿಕೇಶನ್‌ನಲ್ಲಿ ಮೊದಲಿಗೆ ಕಾರ್ಡ್‌ದಾರರು ಬಳಸುವ ಮೊಬೈಲ್ ನಂಬರನ್ನು ಹಾಕಬೇಕು. ನಂತರ ಓಟಿಪಿಯೊಂದಿಗೆ ಒಂದು ಸ್ಕ್ಯಾಪಚರ್ ನಮೂದಿಸಿ, ರಿಜಿಸ್ಟರ್ ಮಾಡಿ. ನಂತರ ಆಧಾರ್ ಸಂಖ್ಯೆಯೊಂದಿಗೆ ಸಂಪೂರ್ಣ ಮಾಹಿತಿಯನ್ನು ಭರ್ತಿ ಮಾಡಿ ಆಯುಷ್ಮಾನ ಭಾರತ ಕಾರ್ಡ್‌ನ್ನು ಪಡೆದುಕೊಳ್ಳಬಹುದು.

ನೋಂದಾಯಿತ ಆಸ್ಪತ್ರೆಗಳ ಮಾಹಿತಿ: ಟೋಲ್ ಫ್ರೀ ಸಂಖ್ಯೆ: 1800 425 8330ಗೆ ಕರೆಮಾಡಿ ತಿಳಿದುಕೊಳ್ಳಬಹುದು ಹಾಗೂ ಸಂಬಂಧಿಸಿದ ಆಸ್ಪತ್ರೆಯ ಆರೋಗ್ಯ ಮಿತ್ರರ ಮೊಬೈಲ್ ಸಂಖ್ಯೆ ಪಡೆದುಕೊಂಡು ಅವರನ್ನು ಸಂಪರ್ಕಿಸಬಹುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರಕಟಿಸಿರುವ ಸಮೀಪದ ನೋಂದಾಯಿತ ಆಸ್ಪತ್ರೆಗಳ ಪಟ್ಟಿಯನ್ನು ನೋಡಬಹುದು.

**ಯೋಜನೆಯ ಸೌಲಭ್ಯ ಪಡೆಯುವುದು ಹೇಗೆ?**

ಪ್ರಾಥಮಿಕ ಮತ್ತು ಸಾಮಾನ್ಯ ದ್ವಿತೀಯ ಚಿಕಿತ್ಸೆಗಳನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ಮಾತ್ರ ನೀಡಲಾಗುತ್ತದೆ. ದ್ವಿತೀಯ ಕ್ಲಿಷ್ಟಕರ ಚಿಕಿತ್ಸೆಗಳು ಮತ್ತು ತೃತೀಯ ಹಂತದ ಕಾಯಿಲೆಗಳಿಗೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಲಭ್ಯವಿದ್ದಲ್ಲಿ ಅಲ್ಲಿಯೇ ನೀಡಲಾಗುತ್ತದೆ. ಇಲ್ಲದಿದ್ದರೆ ರೆಫರಲ್ ನೀಡಲಾಗುತ್ತದೆ. ರೆಫರಲ್ ಪಡೆದುಕೊಂಡ ರೋಗಿಯು ತಾನು ಇಚ್ಛಿಸುವ ಯಾವುದೇ ನೋಂದಾಯಿತ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಹುದು. ರಸ್ತೆ ಅಪಘಾತ ಸೇರಿದಂತೆ 169 ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ ನೇರವಾಗಿ ನೋಂದಾಯಿತ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆಯಬಹುದು.

ಅನುದಾನ ಹಂಚಿಕೆ ವಿವರ: ಯೋಜನೆಯಡಿಯಲ್ಲಿ ರಾಜ್ಯದ 115 ಲಕ್ಷ (ಬಿಪಿಎಲ್) ಕುಟುಂಬಗಳ ಪೈಕಿ 62 ಲಕ್ಷ ಕುಟುಂಬಗಳಿಗೆ (ಅರ್.ಎಸ್.ಬಿ.ವೈ ನೋಂದಾಯಿತ) ಮಾತ್ರ ಕೇಂದ್ರ ಸರ್ಕಾರವು ಶೇ.60ರಷ್ಟು ಅನುದಾನ ಭರಿಸುತ್ತದೆ. ರಾಜ್ಯ ಸರ್ಕಾರವು ಶೇ.40 ರಷ್ಟು ಅನುದಾನ ಭರಿಸುತ್ತದೆ. ಇನ್ನುಳಿದ 53 ಲಕ್ಷ ಕುಟುಂಬಗಳಿಗೆ ರಾಜ್ಯ ಸರ್ಕಾರವೇ ಶೇ.100 ರಷ್ಟು ವೆಚ್ಚ ಭರಿಸುತ್ತದೆ. ಸಾಮಾನ್ಯ ವರ್ಗದ 19 ಲಕ್ಷ ಕುಟುಂಬಗಳಿಗೂ ಸಹ ರಾಜ್ಯ ಸರ್ಕಾರವೇ ಶೇ.100ರಷ್ಟು ಅನುದಾನ ಭರಿಸುತ್ತದೆ.

ಸೌಲಭ್ಯ ಹಾಗೂ ಮಾಹಿತಿಗಾಗಿ: ಹತ್ತಿರದ ಸರ್ಕಾರಿ ಆಸ್ಪತ್ರೆ, ತಾಲೂಕು ಆಸ್ಪತ್ರೆಗಳು, ಜಿಲ್ಲಾ ಆಸ್ಪತ್ರೆ, ಸಕಾರಿ ವೈದ್ಯಕೀಯ ಕಾಲೇಜು ಆಸ್ಪತ್ರೆಗಳು, ಗ್ರಾಮ ಒನ್ ಸೇವಾ ಕೇಂದ್ರ, ಕಾಮನ್ ಸರ್ವಿಸ್ ಕೇಂದ್ರ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಆರೋಗ್ಯ ಮಿತ್ರರು ಆಯುಷ್ಮಾನ್ ಕಾರ್ಡ್‌ಗಳನ್ನು ಪಡೆಯಬಹುದು. ಆರೋಗ್ಯ ಸಹಾಯವಾಣಿ-104, ಟೋಲ್ ಫ್ರೀ ಸಂಖ್ಯೆ: 1800 425 8330ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆಯುಷ್ಮಾನ್ ಕಾರ್ಡ್‌ನ ನೋಡಲ್ ಅಧಿಕಾರಿ ಡಾ. ರಾಜೇಂದ್ರ.ಸಿ. ಬಸರಿಗಿಡದ ತಿಳಿಸಿದ್ದಾರೆ.

**- ಮಂಜುನಾಥ ಹೊಸಳ್ಳಿ.**
ಪ್ರಶಿಕ್ಷಣಾರ್ಥಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ-ಗದಗ.

## ಸಮಾಜ ಸೇವೆಯೂ ಒಂದು ಸೌಭಾಗ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುವ ಮನೋಭಾವನೆ ಎಲ್ಲರಲ್ಲಿ ಬಂದಾಗ, ಸಮಾಜ ಹೆಚ್ಚು ಹೆಚ್ಚು ಕ್ರೀಯಾಶೀಲವಾಗಿ ಮುನ್ನಡೆಯುತ್ತದೆ. ಸಮಾಜಕ್ಕೆ ಸೇವೆ ಮಾಡುವುದೇ ಒಂದು ಸೌಭಾಗ್ಯ ಎನ್ನುವ ಭಾವನೆ ಮೂಡುವದು ಅವಶ್ಯವಾಗಿದೆ ಎಂದು ಬ್ರಾಹ್ಮಣ ಸಮಾಜದ ಹಿರಿಯ ಮುಖಂಡ ವಿ.ಎಲ್. ಪೂಜಾರ ಹೇಳಿದರು.

ಅವರು ಪಟ್ಟಣದ ಶಂಕರಭಾರತಿ ಸಮುಧಾಯ ಭವನದಲ್ಲಿ ದತ್ತ-ಜಯಂತಿಯ ಅಂಗವಾಗಿ ಬುಧವಾರ ಏರ್ಪಡಿಸಲಾಗಿದ್ದ ಹಿರಿಯ ಪದಾಧಿಕಾರಿಗಳಿಗೆ ಸನ್ಮಾನ ಮತ್ತು ಧಾರ್ಮಿಕ ಕಾರ್ಯಕ್ರಮಗಳ ಮುಕ್ತಾಯ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಬ್ರಾಹ್ಮಣ ಸಮಾಜದ ಉಪಾಧ್ಯಕ್ಷರಾಗಿ ನಾರಾಯಣಭಟ್ ಪುರಾಣಿಕ ಮತ್ತು ಕಾರ್ಯದರ್ಶಿಯಾಗಿ ಕೆ.ಎಸ್. ಕುಲಕರ್ಣಿಯವರು ಎರಡು ದಶಕಗಳಿಗೂ ಹೆಚ್ಚು ಕಾಲ ನಿಸ್ವಾರ್ಥ ಸೇವೆ ಸಲ್ಲಿಸಿ, ಯುವಕರು ಈ ಸೇವೆಯಲ್ಲಿ ಮುಂದೆ ಬರಲಿ ಎನ್ನುವ ಉದ್ದೇಶದಿಂದ ಹೊಸಬರಿಗೆ ಅವಕಾಶ ಮಾಡಿಕೊಡುವ ಜೊತೆಗೆ ಸಮಾಜಕ್ಕೆ ಸದಾ ಮಾರ್ಗದರ್ಶನ ಮಾಡುವ ನಿಟ್ಟಿನಲ್ಲಿ ಕಾರ್ಯ ಮಾಡುತ್ತಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿದ ಕೆ.ಎಸ್. ಕುಲಕರ್ಣಿಯವರು ಇಲ್ಲಿನ ಬ್ರಾಹ್ಮಣ ಸಮಾಜದಲ್ಲಿ ಸೇವೆ ಸಲ್ಲಿಸಲು ಅವಕಾಶ ದೊರೆಕಿರುವುದು ನನ್ನ ಸೌಭಾಗ್ಯವಾಗಿದೆ. ಸಮಾಜಕ್ಕೆ ನಮ್ಮಿಂದಾದ ಸೇವೆ-ಸಹಕಾರ ನೀಡಲು ಸದಾ ಸಿದ್ಧರಾಗಿದ್ದೇವೆ. ನಮ್ಮ ಅವಧಿಯಲ್ಲಿ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ ಅರ್ಪಿಸುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಬ್ರಾಹ್ಮಣ ಸಮಾಜದ ತಾಲೂಕಾಧ್ಯಕ್ಷ ಕೃಷ್ಣ ಕುಲಕರ್ಣಿ, ಧೃವರಾಜ ಬೆಟಗೇರಿ, ವೆಂಕಣ್ಣ ಗುಡಿ, ಆರ್. ಎಚ್. ಕುಲಕಣಿ, ಗುರುರಾಜ ಪಾಟೀಲಕುಲಕರ್ಣಿ, ಕೆ.ಎಸ್. ಕುಲಕರ್ಣಿ, ಅರವಿಂದ ದೇಶಪಾಂಡೆ, ಶಂಕರ ಬೆಟಗೇರಿ, ಡಿ.ಪಿ. ಹೇಮಾದ್ರಿ, ಡಾ. ಪ್ರಸನ್ನ ಕುಲಕರ್ಣಿ, ಬಿ.ಕೆ. ಕುಲಕರ್ಣಿ, ಅನೂಜಾ ಪೂಜಾರ, ಶಾಲಿನಿ ಬೆಟಗೇರಿ, ಸಾವಿತ್ರಿ ದೇಶಪಾಂಡೆ, ಮೀನಾಕ್ಷಿ ಸರ್‌ದೇಶಪಾಂಡೆ, ವೀಣಾ ಪಡ್ನೀಸ್, ಮೇಘಾ ಸಾಹುಕಾರ, ಗಿರಿಜಾಬಾಯಿ ಕುಲಕರ್ಣಿ, ಕಮಲಾಬಾಯಿ ಪುರಾಣಿಕ, ಗೀತಾಬಾಯಿ ದೇಶಪಾಂಡೆ, ರಾಧಾ ಕುಲಕರ್ಣಿ, ಅಕ್ಷತಾ ಕುಲಕರ್ಣಿ, ಸೀಮಂತಿನಿ ಕುಲಕರ್ಣಿ, ಅಂಬುಜಾ ಬೆಟಗೇರಿ ಮುಂತಾದವರಿದ್ದರು.

## ಶ್ರೀ ರಂಭಾಪುರಿ ಜಗದ್ಗುರುಗಳ 68ನೇ ಜನ್ಮದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**



ಶ್ರೀ ಜಗದ್ಗುರು ರೇಣುಕಾಚಾರ್ಯರು ಆವಿರ್ಭವಿಸಿದ ತೆಲಂಗಾಣ ರಾಜ್ಯದ ಯಾದಾದ್ರಿ ಭುವನಗಿರಿ ಜಿಲ್ಲೆಯ ಅಲೇರುಮಂಡಲದ ಕೊಲನುಪಾಕ (ಕೊಲ್ಲಿಪಾಕಿ) ಶ್ರೀ ಚಂಡಿಕಾಂಬಾ ಸಮೇತ ಸ್ವಯಂಭು ಶ್ರೀ ಸೋಮೇಶ್ವರ ದೇವಸ್ಥಾನದ ಪರಿಸರದಲ್ಲಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ 68ನೇ ಜನ್ಮದಿನೋತ್ಸವ ಜ.7ರಂದು ಜರುಗುವುದು.

ಇದರಂಗವಾಗಿ ಜನೆವರಿ 3ರಿಂದ 7ರವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸ್ವಯಂಭು ಶ್ರೀ ಸೋಮೇಶ್ವರ ಮಹಾಲಿಂಗಕ್ಕೆ ಮಹಾರುದ್ರಾಭಿಷೇಕ, ವಿಶೇಷ ಪೂಜೆ, ಸಹಸ್ರ ಪುಷ್ಪಾರ್ಚನೆ ಹಾಗೂ ಶ್ರೀ ಚಂಡಿಕಾಂಬಾ ದೇವಿಗೆ ಕುಂಕುಮಾರ್ಚನೆ ನಡೆಯುವುದು.

ಜ. 7ರಂದು ನಾಡಿನ ಶಿವಾಚಾರ್ಯರ ಮತ್ತು ಧರ್ಮಾಭಿಮಾನಿಗಳ ಉಪಸ್ಥಿತಿಯಲ್ಲಿ ಶ್ರೀಮದ್ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ 68ನೇ ವರ್ಷದ ಜನ್ಮದಿನೋತ್ಸವ ಆಚರಣೆ ನಡೆಯುವುದು ಎಂದು ಶ್ರೀ ಕೊಲ್ಲಿಪಾಕಿ ಸೋಮೇಶ್ವರ ಜಗದ್ಗುರು ರೇಣುಕಾಚಾರ್ಯ ಡೆವೆಲಪಮೆಂಟ್ & ಚಾರಿಟೇಬಲ್ ಟ್ರಸ್ಟ್‌ನವರು ತಿಳಿಸಿದ್ದಾರೆ.

## ಕನಕದಾಸರು ಹಾಕಿಕೊಟ್ಟ ವಿನಯಶೀಲತೆ ಎಲ್ಲರದಾಗಲಿ



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಹಲವಾರು ದಾರ್ಶನಿಕರ ಸಾಲಿನಲ್ಲಿ ಕನಕದಾಸರು ಶ್ರೇಷ್ಠರಾಗಿದ್ದಾರೆ. ಅವರು ಕನ್ನಡ ನಾಡು-ನುಡಿಯ ಮೆರುಗನ್ನು ಹೆಚ್ಚಿಸಿದ ಕಿರ್ತಿಯ ಮೇರುಶಿಖರ ಎಂದು ಗೋಣಿಬಸಪ್ಪ ಕೊರ್ಲಹಳ್ಳಿ ಹೇಳಿದರು.

ಇಲ್ಲಿನ ಡಂಬಳ ಗ್ರಾಮದ ಸಂಗೊಳ್ಳಿ ರಾಯಣ್ಣ ವೃತ್ತದ ಆವರಣದಲ್ಲಿ ದಾಶ ಶ್ರೇಷ್ಠ ಕನಕದಾಸರ ಜಯಂತ್ಯುತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕನಕದಾಸರ ವಿನಯಶೀಲ ಗುಣವನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು. ಯಾರ ಹತ್ತಿರ ವಿನಯಶೀಲತೆ ಇರುತ್ತದೆಯೋ ಅವರ ಬಂಡಿ ಸರಿಯಾಗಿ ಸಾಗುತ್ತದೆ. ಕನಕದಾಸರು ಹಾಕಿಕೊಟ್ಟ ವಿನಯಶೀಲ ಗುಣವನ್ನು ಪ್ರತಿಯೊಬ್ಬರೂ ಹೊಂದಬೇಕು ಎಂದು ಹೇಳಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಡೊಳ್ಳಿನ ಮೇಳ ಮತ್ತು ಹಲವು ವಾದ್ಯಗಳ ಮೂಲಕ ಕನಕದಾಸರ ಭಾವಚಿತ್ರದ ಮೆರವಣಿಗೆ ಜರುಗಿತು.

ಕಾರ್ಯಕ್ರಮದಲ್ಲಿ ವೇ.ಮೂ ಎಸ್.ಜಿ. ಗುರುವಿನ, ಬಿ.ಎಸ್. ಬಂಡಿ, ಕುಬೇರಪ್ಪ ಬಂಡಿ, ಕುಬೇರಪ್ಪ ಕೊಳ್ಳಾರ, ಆರ್.ಜಿ. ಕೊರ್ಲಹಳ್ಳಿ, ಮಲ್ಲಪ್ಪ ಮಠದ, ಮಾರುತಿ ಹೊಂಬಳ, ಸಣ್ಣಹನಮಪ್ಪ ಬಂಡಿ, ರಮೇಶ ಹೊಂಬಳ, ರೇವಣಸಿದ್ದಪ್ಪ ಕರಿಗಾರ, ಕುಬೇರಪ್ಪ ಕವಲಿ, ಶೇಕಪ್ಪ ಹೊಂಬಳ, ಯಲ್ಲಪ್ಪ ಕರಿಗಾರ, ರಾಜಪ್ಪ ಯಪ್ಪೆರಿ, ರಾಮಣ್ಣ ಮಂಗೋಜಿ, ರಾಮಪ್ಪ ಪೂಜಾರ, ಬೀರಪ್ಪ ಪೂಜಾರ, ಭರಮಪ್ಪ ಯಪ್ಪೆರಿ, ಮಳಿಂಗರಾಯ ಕಣವಿ, ಕೆ.ಎಮ್. ಡೊಳ್ಳಿನ, ರಾಮಪ್ಪ ಹೊಂಬಳ, ಶಂಕ್ರಪ್ಪ ರಾಗಣ್ಣವರ, ಮಂಜುನಾಥ ರಾಗಣ್ಣವರ, ಮಾರುತಿ ಬೇವನಮರದ, ಕಳ್ಳೆಪ್ಪ ಪೂಜಾರ, ಹನಮಂತಪ್ಪ ಬೇದಟ್ಟಿ, ಮಳ್ಳಪ್ಪ ಕೊಳ್ಳಾರ, ರಾಜಪ್ಪ ಮಂಗೋಜಿ, ಸೋಮಪ್ಪ ಹೊಂಬಳ, ಹನಮಂತಪ್ಪ ಹಾಡಕರ, ಲೆಂಕಪ್ಪ ಬಂಡಿ, ಚಂದ್ರಪ್ಪ ಬಂಡಿ, ರವಿ ರಾಘಣ್ಣವರ, ರಾಮಪ್ಪ ಬಚನಳ್ಳಿ ಮುಂತಾದವರಿದ್ದರು.

## ಕ್ರಿಸ್ತನ ಅನುಯಾಯಿಗಳು ಶಾಂತಿ ಪ್ರಿಯರು

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**




ಜಗತ್ತಿನಲ್ಲಿ ಎಲ್ಲಾ ಮಾನವರೂ ಸಮಾನರು, ಭಾರತದಲ್ಲಿ ಸಂವಿಧಾನ ಬದ್ಧವಾದ ಅಧಿಕಾರ ಮತ್ತು ಅವಕಾಶದ ಮೂಲಕ ಎಲ್ಲಾ ಸಮುದಾಯಗಳಿಗೆ, ಧರ್ಮಗಳಿಗೆ ಜೀವಿಸುವ ಹಕ್ಕನ್ನು ಕೊಟ್ಟಿದೆ ಎಂದು ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಹೇಳಿದರು.

ಅವರು ನಗರದ ತಾಲೂಕಾ ಕ್ರೀಡಾಂಗಣದಲ್ಲಿ ತಾಲೂಕ ಪಾಸ್ಟರ್ಸ್ ಅಸೋಸಿಯೇಷನ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಕ್ರಿಸಮಸ್ ಹಬ್ಬ, ಹೊಸ ವರ್ಷಾಚರಣೆ ಮತ್ತು ಶಾಸಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ತಾಲೂಕಿನ ಎಲ್ಲಾ ಚರ್ಚ್‌ಗಳ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕ್ರಿಶ್ಚಿಯನ್ ಸಮುದಾಯದವರು ಶಾಂತಿ ಪ್ರಿಯರು. ಸಮಾಜಮುಖಿ ಸೇವೆಗೆ ಹೆಸರಾದವರು. ತಾಯಿ ಮದರ್ ಥೆರೆಸಾರಂಥವರು ಭಾರತದ ಕುಷ್ಠ ರೋಗಿಗಳ ಪಾಲನೆ-ಪೋಷಣೆ ಮತ್ತು ಚಿಕಿತ್ಸೆಯಲ್ಲಿ ಹೆಸರು ಮಾಡಿ ನೋಬೆಲ್ ಪ್ರಶಸ್ತಿ ತಂದವರು. ಇಂತಹ ಸಮುದಾಯದ ಸತ್ಕಾರ ತಮಗೆ ಇನ್ನಷ್ಟು ಸಮಾಜ ಸೇವೆ ಮಾಡಲು ಸ್ಫೂರ್ತಿಯಾಗಿದೆ. ಎಲ್ಲರ ಸಹಕಾರದಿಂದ ಮೂರನೇ ಬಾರಿ ಶಾಸಕನಾಗಿದ್ದೇನೆ. ಇನ್ನಷ್ಟು ಉತ್ತಮ ಕೆಲಸ ಮತ್ತು ಅಭಿವೃದ್ಧಿ ಮಾಡಲು ಕಟಿಬದ್ಧನಾಗಿದ್ದು, ಶೀಘ್ರ ಅನುದಾನ ತಂದು ಕೆಲಸ ಮಾಡುವ ಭರವಸೆ ನೀಡಿದರು.

ಕ್ರಿಸ್ತ ನಮನ ಕಾರ್ಯಕ್ರಮದಲ್ಲಿ ವಿಶ್ವವಾಣಿ ರಾಜ್ಯ ಸಂಯೋಜಕ ಬದ್ರಿನಾಥ ಬೆಂಗಳೂರು ಉಪನ್ಯಾಸ ನೀಡಿದರು. ತಾ.ಪಂ ಮಾಜಿ ಅಧ್ಯಕ್ಷ ಎಸ್. ಬಾಲಚಂದ್ರನ್, ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜ್ಯೋತಿ ಎಂ.ಗೊಂಡಬಾಳ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯಲ್ಲಿ ಕ್ರಿಸ್ತಜ್ಯೋತಿ ಇಸಿಐ ಚರ್ಚ್‌ನ ಫಾದರ್ ರವಿಕುಮಾರ್, ರೆ.ನವನೀತಕುಮಾರ್, ರೆ.ಅಬ್ರಾಹಾಮ್ ನತಾನಯೇಲ ಭಾಗ್ಯನಗರ, ರೆ. ಬಿ.ಎಂ. ಡ್ಯಾನಿಯೇಲ, ರೆ. ಬಿ. ಜೋಸೇಫ್ ಮುನಿರಾಬಾದ್, ಸ. ನತಾನಯೇಲ, ರೆ. ಎನ್. ಸೋಲೊಮೋನರಾಜ, ರೆ. ದೇವೇಂದ್ರಪ್ಪ ಜೆ.ಎಲ್., ಶ್ಯಾಮಸುಂದರ್ ಹೆಚ್.ಭಾಗ್ಯನಗರ ಇತರರು ಇದ್ದರು.

## ಸರ್ಕಾರಿ ಶಾಲೆಯ ಗೋಳು ಕೇಳುವವರಿಲ್ಲ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**



ಕೊಪ್ಪಳ ಜಿಲ್ಲೆಯಾಗಿ ಎರಡುವರೆ ದಶಕಗಳು ಗತಿಸಿದರೂ ಶೈಕ್ಷಣಿಕವಾಗಿ ಹಿಂದುಳಿದ ಪಟ್ಟಿಯ ಆಗ್ರಸ್ಥಾನದಲ್ಲಿದೆ. ತಾಲೂಕಿನ ಗಿಣಿಗೇರಿ ಗ್ರಾ.ಪಂ ವ್ಯಾಪ್ತಿಯ ವಾರ್ಡ್ ನಂ.1ರಲ್ಲಿನ ಸರ್ಕಾರಿ 'ಶಿವಶಾಂತನಗರ' ಶಾಲೆ ಇದಕ್ಕೊಂದು ನಿದರ್ಶನವಾಗಿದೆ.

ಪ್ರಸ್ತುತ ಈ ಶಾಲೆಯ ಎಡ ಮತ್ತು ಬಲಭಾಗದಲ್ಲಿ ಸರ್ಕಾರದ ಜಾಗೆಯನ್ನು ಇಲ್ಲಿನ ರಾಜಕೀಯ ಪ್ರಬಲರಿಂದ ಎರಡು ಸಮುದಾಯದ ಹೆಸರಿನಲ್ಲಿ ಅನಧಿಕೃತವಾಗಿ ಪಂಚಾಯಿತಿ ದಾಖಲೆಯಲ್ಲಿ ನೋಂದಾಯಿಸಿದ್ದಾರೆ ಎನ್ನಲಾಗಿದೆ. ಉಳಿದ ಜಾಗೆಯನ್ನು ಓರ್ವರು ಕಬ್ಜಾ ಮಾಡಿಕೊಂಡಿದ್ದಾರೆ. ಈ ಕುರಿತು ಹಲವರು ಮಾಹಿತಿ ಕೇಳಿದರೆ ಇದರ ದಿಕ್ಕು ತಪ್ಪಿಸುವ ಕೆಲಸವನ್ನು ಈಗಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮಾಡುತ್ತಿದ್ದಾರೆ ಎನ್ನಲಾಗಿದೆ. ಇದರ ಹಿಂದೆ ಬಲವಾದ ರಾಜಕೀಯ ಒತ್ತಡ ಅಡಗಿಡೆ ಎಂಬ ಆರೋಪಗಳಿದ್ದು, ಸರ್ಕಾರಿ ಜಾಗೆಯನ್ನು ಅಲ್ಲಿನ ಸರ್ಕಾರಿ ಶಾಲೆಗೆ ನೀಡಬೇಕು ಎಂದು ಗಿಣಿಗೇರಿಯ ಅನೇಕ ಸಂಘಗಳು ಮತ್ತು ಗ್ರಾಮಸ್ಥರು ಆಗ್ರಹಿಸುತ್ತಿದ್ದಾರೆ.

ಇಲ್ಲಿನ ಶಾಲೆಗೆ ಸರಿಯಾದ ಆಟದ ಮೈದಾನವಿಲ್ಲ. ಕಟ್ಟಡದ ಮೇಲ್ಛಾವಣಿ ಕುಸಿದು ಬೀಳುವ ಹಂತದಲ್ಲಿದೆ. ಈ ಬಗ್ಗೆ ಶಿಕ್ಷಣ ಇಲಾಖೆ ಮತ್ತು ಪಂಚಾಯಿತಿ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಪಂಚಾಯಿತಿಗೆ ಮತ್ತು ಶಾಲೆಗೆ ಬೀಗ ಹಾಕುವ ಸಂದರ್ಭ ಬಂದೀತು ಎಂದು ಗ್ರಾಮಸ್ಥರು ಎಚ್ಚರಿಕೆಯನ್ನು ನೀಡಿದ್ದಾರೆ.

**■ವಿಜಯಸಾಕ್ಷಿ ಸುದ್ದಿ, ಗದಗ**

ಲಕ್ಷ್ಮೇಶ್ವರದ ವೇದಿಕಾ ಭರತನಾಟ್ಯ ಶಾಲೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶುಕ್ರವಾರ ರಂಭಾಪುರಿ ಜ.ವೀರಗಂಗಾಧರ ಸಮುದಾಯ ಭವನದಲ್ಲಿ ಜರುಗಿದ 'ನೃತ್ಯ ಸಂಭ್ರಮ' ಕಾರ್ಯಕ್ರಮದಲ್ಲಿ ವೇದಿಕಾ ಭರತನಾಟ್ಯ ಶಾಲೆಯ ವಿದ್ಯಾರ್ಥಿನಿಯರು ಭತರನಾಟ್ಯ ಪ್ರದರ್ಶಿಸಿದರು.



## ಕೋವಿಡ್ -19: ರಾಜ್ಯದಲ್ಲಿ ಇಂದು 173 ಹೊಸ ಸೋಂಕು ಪ್ರಕರಣ ಪತ್ತೆ, 2 ಸಾವು

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕದಲ್ಲಿ ಶುಕ್ರವಾರ 173 ಹೊಸ ಕೋವಿಡ್ -19 ಸೋಂಕು ಪ್ರಕರಣಗಳು ದಾಖಲಾಗಿದ್ದು, ಕಳೆದ 24 ಗಂಟೆಗಳಲ್ಲಿ ಎರಡು ಕೊರೋನವೈರಸ್ ಸಂಬಂಧಿತ ಸಾವುಗಳು ವರದಿಯಾಗಿವೆ. ಈ ಬಗ್ಗೆ ರಾಜ್ಯ ಆರೋಗ್ಯ ಇಲಾಖೆ ಮಾಹಿತಿ ನೀಡಿದ್ದು, ಶುಕ್ರವಾರ 173 ಹೊಸ ಕೋವಿಡ್ -19 ಸೋಂಕು ಪ್ರಕರಣಗಳ ದಾಖಲಾತಿಯೊಂದಿಗೆ ರಾಜ್ಯದಲ್ಲಿನ ಸಕ್ರಿಯ ಪ್ರಕರಣಗಳ ಸಂಖ್ಯೆ 702ಕ್ಕೆ ಏರಿದೆ.

# ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಾಹನಗಳು ಅಪಘಾತಕ್ಕೀಡಾದಾಗ, ಸಂಸ್ಥೆಯ ವಾಹನಗಳಲ್ಲಿ ಸಂಚರಿಸುತ್ತಿದ್ದ ಪ್ರಯಾಣಿಕರು ದುರದೃಷ್ಟವಶಾತ್ ಮೃತಪಟ್ಟಲ್ಲಿ, ಮೃತ ಪ್ರಯಾಣಿಕರ ಅವಲಂಬಿತರಿಗೆ ಪ್ರಸ್ತುತ, ರೂ.3,00,000/– (ರೂ.ಮೂರು ಲಕ್ಷ ಮಾತ್ರ) ಅಪಘಾತ ಪರಿಹಾರ ಮೊತ್ತವನ್ನು ನೀಡಲಾಗುತ್ತಿದ್ದು, ಮೃತ ಪ್ರಯಾಣಿಕರ ಅವಲಂಬಿತರಿಗೆ ಹೆಚ್ಚಿನ ಆರ್ಥಿಕ ನೆರವು ನೀಡುವ ಸದುದ್ದೇಶದಿಂದ ಸದರಿ ಅಪಘಾತ ಪರಿಹಾರ ಮೊತ್ತವನ್ನು ರೂ. 10,00,000/– (ಹತ್ತು ಲಕ್ಷ ಮಾತ್ರ) ಕ್ಕೆ ದಿನಾಂಕ: 01–01–2024 ರಿಂದ ಜಾರಿಗೆ ಬರುವಂತೆ ಹೆಚ್ಚಿಸಲಾಗಿದೆ.

ಮೃತರ ಅವಲಂಬಿತರಿಗೆ ಹೆಚ್ಚುವರಿ ಪರಿಹಾರ ಮೊತ್ತವನ್ನು ನೀಡುವ ಸಲುವಾಗಿ ರೂ.50 ರಿಂದ ರೂ.99 ರ ವರೆಗಿನ ಮುಖಬೆಲೆಯ ಟಿಕೆಟ್ ಪಡೆದು ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವ ಪ್ರತಿ ಪ್ರಯಾಣಿಕರಿಂದ ತಲಾ ಒಂದು ರೂಪಾಯಿ ಹಾಗೂ ರೂ.100 ಹಾಗೂ ಹೆಚ್ಚಿನ ಮುಖಬೆಲೆಯ ಟಿಕೆಟ್ ಪಡೆದು ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವ ಪ್ರತಿ ಪ್ರಯಾಣಿಕರಿಂದ ತಲಾ ಎರಡು ರೂಪಾಯಿಯಂತೆ ಅಪಘಾತ ಪರಿಹಾರ ವಂತಿಕೆ ಸಂಗ್ರಹಣೆಯನ್ನೂ ಕೂಡಾ ಜನವರಿ 2024ರಿಂದ ಆರಂಭಿಸಲಾಗುವುದು ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಸ್‌ಗಳಿಗೆ ಪ್ರತಿ ವರ್ಷ ಫಿಟ್‌ನೆಸ್ ಪ್ರಮಾಣಪತ್ರ ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೆಎಸ್‌ಆರ್‌ಟಿಸಿ ಬಸ್‌ಗಳ ಕಳಪೆ ಸ್ಥಿತಿಯಿಂದ ಅಪಘಾತಗಳನ್ನು ತಪ್ಪಿಸುವ ಮೂಲಕ ಪ್ರಯಾಣಿಕರ ಸುರಕ್ಷತೆ ಮಾಡಲು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ (ಆರ್‌ಟಿಒ) ಪ್ರತಿ ವರ್ಷ ಫಿಟ್‌ನೆಸ್ ಪ್ರಮಾಣಪತ್ರ ಪಡೆಯಬೇಕು ಎಂದು ಕರ್ನಾಟಕ ಹೈಕೋರ್ಟ್ ನಿರ್ದೇಶಿಸಿದೆ.

ರಸ್ತೆಯಲ್ಲಿ ಚಲಿಸಲು ಬಸ್‌ಗಳ ಫಿಟ್‌ನೆಸ್ ಪರಿಶೀಲಿಸಲು ಮತ್ತು ಪ್ರಮಾಣೀಕರಿಸುವಲ್ಲಿ ಆರ್‌ಟಿಒ ಅಧಿಕಾರಿಗಳು ಯಾವುದೇ ಸಾಂದರ್ಭಿಕ ವಿಧಾನವನ್ನು ಹೊಂದಿರಬಾರದು ಎಂದು ಪ್ರಯಾಣಿಕರ ಸುರಕ್ಷತೆಯನ್ನು ಒತ್ತಿಹೇಳುವ ಸಂದರ್ಭದಲ್ಲಿ ನ್ಯಾಯಾಲಯ ಹೇಳಿದೆ.

### ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮ 'ದೀಕ್ಷಾರಂಭ'

# ಇಂದಿನ ವಿದ್ಯಾರ್ಥಿಗಳೇ ನಾಳಿನ ರಾಷ್ಟ್ರ ಶಕ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಗುರಿಯನ್ನು ಹೊಂದಿ, ಗುರುವಿನ ಮಾರ್ಗದರ್ಶನವನ್ನು ಪಡೆಯಬೇಕು. ತಂದೆ–ತಾಯಿಗಳ ಆಶಯವನ್ನು ಈಡೇರಿಸುವಂತವರಾಗಬೇಕು. ಶ್ರದ್ಧೆ, ಪರಿಶ್ರಮ, ಹೆಚ್ಚಿನ ಓದು ಇದ್ದಾಗ ಮಾತ್ರ ವಿದ್ಯಾರ್ಥಿಗಳು ಯಶಸ್ಸನ್ನು ಗಳಿಸಲು ಸಾಧ್ಯ, ಹಾಗೂ 'ಇಂದಿನ ವಿದ್ಯಾರ್ಥಿ ಯುವಶಕ್ತಿಯೇ, ಮುಂದಿನ ರಾಷ್ಟ್ರದ ಶಕ್ತಿ' ಇದನ್ನರಿತು ವಿದ್ಯಾರ್ಥಿಗಳು ಅಧ್ಯಯನವನ್ನು ಮಾಡಬೇಕು ಎಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಡಾ. ಬಿ.ಕೆ. ರವಿ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವಾದ 'ದೀಕ್ಷಾರಂಭ'ದಲ್ಲಿ ಪಾಲ್ಗೊಂಡು ಮಾತನಾಡಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ ಪೂಜ್ಯ ನಂದಿವೇರಿ ಮಠದ ಶ್ರೀ ಶಿವಕುಮಾರ ಸ್ವಾಮೀಜಿಗಳು ಮಾತನಾಡಿ, ನಿಜವಾದ ಶಿಷ್ಯ ಜ್ಞಾನ, ಬೆಳಕು, ದಾರಿ, ಅರಿವನ್ನು ಹುಡುಕಿಕೊಂಡು ಬರುತ್ತಾರೆ. ಗುರು ಎಂದರೆ ಬೆಳಕು, ಗುರು ಎಂದರೆ ದಾರಿ. ಅಂತಹ ಗುರುಗಳಿಂದ ವಿದ್ಯೆ ಮತ್ತು ಕೌಶಲ್ಯವನ್ನು ಪಡೆದ ವಿದ್ಯಾರ್ಥಿಗಳು ಗ್ರಾಮ ಮತ್ತು ಸಮಾಜ ಕಟ್ಟುವ ದೀಕ್ಷಾರಂಭ ಇಂದಿನ ವಿದ್ಯಾರ್ಥಿಗಳಿಗೆ ಆಗಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷೀಯ ನುಡಿಗಳನ್ನಾಡಿದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಷ್ಣುಕಾಂತ್ ಎಸ್.ಚಟಪಲ್ಲಿ ಮಾತನಾಡಿ, ವಿದ್ಯಾರ್ಥಿಗಳು ಕಲಿಕೆಯಲ್ಲಿ ಶಿಸ್ತನ್ನು ಅಳವಡಿಸಿಕೊಂಡು ಉತ್ತಮ ರೀತಿಯಲ್ಲಿ ವಿದ್ಯಾರ್ಜನೆಯನ್ನು ಮಾಡಿ, ಗ್ರಾಮಗಳ ಅಭಿವೃದ್ಧಿ ಮತ್ತು ದೇಶದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಕರೆ ನೀಡಿದರು.




ಕಾರ್ಯಕ್ರಮದಲ್ಲಿ ವಿಶ್ವಮಾನವ ಸಂದೇಶ ಸಾರಿದ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನವನ್ನು ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಆಚರಿಸಲಾಯಿತು. ಅತಿಥಿಗಳ ಪರಿಚಯವನ್ನು ಡಾ. ಲಿಂಗರಾಜ ನಿಡುವಣಿ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಸಂಯೋಜಕರಾದ ವಿಜಯಮಹಾಂತೇಶ ಕಣವಿ, ಡಾ. ದೀಪಾ ಪಾಟೀಲ್, ವಿಶ್ವವಿದ್ಯಾಲಯದ ಅಧಿಕಾರಿವರ್ಗ, ಬೋಧಕ–ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಪ್ರಥಮ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮುಂಜಾನೆಯ ಔಪಚಾರಿಕ ಕಾರ್ಯಕ್ರಮದ ನಂತರ ವಿಶ್ವವಿದ್ಯಾಲಯದಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಶೈಕ್ಷಣಿಕ, ಸಂಶೋಧನಾ, ತರಬೇತಿ, ವಿಸ್ತೀರ್ಣ ಚಟುವಟಿಕೆ ಹಾಗೂ ವಿವಿಧ ಕೋಶಗಳ ಸಂಯೋಜಕರು ಆಯಾ ವಿಭಾಗಗಳ ಪರಿಚಯ ನೀಡಿದರು. ಡಾ. ಪ್ರಕಾಶ್ ಭಟ್ ಇವರಿಂದ ಗ್ರಾಮೀಣಾಭಿವೃದ್ಧಿ ವಿಷಯಕ್ಕೆ ಕುರಿತಂತೆ ಸಂವಾದ ಕಾರ್ಯಕ್ರಮ ಜರುಗಿತು. ಎರಡು ದಿನದ ಈ ಕಾರ್ಯಕ್ರಮವು ಮೊದಲ ದಿನದಂದು ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದ್ದ ಕಲಿಕಾ ಚಟುವಟಿಕೆ ನಾಯಕತ್ವ ಗುಣಗಳನ್ನು ಬೆಳೆಸುವ ನಿಟ್ಟಿನಲ್ಲಿ ವಿವಿಧ ಕಲಿಕಾ ಆಟಗಳನ್ನು ಆಯೋಜಿಸುವುದರೊಂದಿಗೆ ಸಂಪನ್ನಗೊಂಡಿತು

ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಡಾ. ಸುರೇಶ್ ವಿ.ನಾಡಗೌಡರ ಅವರು ಆಶಯ ನುಡಿಗಳನ್ನಾಡಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ಕ್ಷೇತ್ರಗಳ ಅಭಿವೃದ್ಧಿ ದೃಷ್ಟಿಕೋನವನ್ನು ಇಟ್ಟುಕೊಂಡು ಸ್ಥಾಪಿತವಾದ ವಿಶ್ವವಿದ್ಯಾಲಯ ಕನಸನ್ನು ಈಡೇರಿಸಲು ಕಳೆದ ಏಳು ವರ್ಷಗಳ ಹಿಂದೆ ಅಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವ ಡಾ. ಎಚ್.ಕೆ. ಪಾಟೀಲರ ಆಶಯದಂತೆ ಈ ವಿಶ್ವವಿದ್ಯಾಲಯ ಎತ್ತರಕ್ಕೆ ಬೆಳೆಯುತ್ತಿದೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ನುಡಿದರು.

ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಡಾ. ಸುರೇಶ್ ವಿ.ನಾಡಗೌಡರ ಅವರು ಆಶಯ ನುಡಿಗಳನ್ನಾಡಿ, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ಕ್ಷೇತ್ರಗಳ ಅಭಿವೃದ್ಧಿ ದೃಷ್ಟಿಕೋನವನ್ನು ಇಟ್ಟುಕೊಂಡು ಸ್ಥಾಪಿತವಾದ ವಿಶ್ವವಿದ್ಯಾಲಯ ಕನಸನ್ನು ಈಡೇರಿಸಲು ಕಳೆದ ಏಳು ವರ್ಷಗಳ ಹಿಂದೆ ಅಂದಿನ ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವ ಡಾ. ಎಚ್.ಕೆ. ಪಾಟೀಲರ ಆಶಯದಂತೆ ಈ ವಿಶ್ವವಿದ್ಯಾಲಯ ಎತ್ತರಕ್ಕೆ ಬೆಳೆಯುತ್ತಿದೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ನುಡಿದರು.

# ಕರವೇ ರಾಜ್ಯಾಧ್ಯಕ್ಷರ ಬಿಡುಗಡೆಗೆ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕರ್ನಾಟಕ ರಕ್ಷಣಾ ವೇದಿಕೆ ಕೊಪ್ಪಳ ಜಿಲ್ಲಾ ಘಟಕದಿಂದ ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಹಾಗೂ ಕಾರ್ಯಕರ್ತರನ್ನು ಅಕ್ರಮವಾಗಿ ಬಂಧಿಸಿ ಅಗೌರವದಿಂದ ನಡೆಸಿಕೊಂಡಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ರಾ.ಹೆ 63 ತಡೆದು ಪ್ರತಿಭಟಿಸಿದರು.

ಜಿಲ್ಲಾಧ್ಯಕ್ಷ ಬಿ.ಗಿರೀಶಾನಂದ ಜ್ಞಾನಸುಂದರ ಮಾತನಾಡಿ, ರಾಜ್ಯ ಸರ್ಕಾರದ, ಬಿಬಿಎಂಪಿ ಹಾಗೂ ಸ್ಥಳೀಯ ಪ್ರಾಧಿಕಾರಗಳ ಸ್ಪಷ್ಟ ಆದೇಶವನ್ನು ಉಲ್ಲಂಘನೆ ಮಾಡಿ ಆಂಗ್ಲ ಮತ್ತು ಇತರೆ ಭಾಷೆಗಳ ನಾಮಫಲಕವನ್ನು ಹಾಕಿರುವವರ ಉದ್ದಿಮೆಗಳು, ವಾಣಿಜ್ಯ ಮಳಿಗೆಗಳು,



ಹೋಟೆಲ್ ಸಂಕೀರ್ಣಗಳು ಹಾಗೂ ಮಾಲ್‌ಗಳಿಗೆ ನವೆಂಬರ್–2023ರಿಂದ ನಾಮಫಲಕಗಳನ್ನು ಬದಲಾವಣೆಗೊಳಿಸಲು ಕಾಲಾವಕಾಶ ನೀಡಿದ್ದರು. ಈ ಸಂಬಂಧ ಪ್ರತಿಭಟನಾ ಮೆರವಣಿಗೆ ಹೊರಡುವ ಸಂದರ್ಭದಲ್ಲಿ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ್ರು ಮತ್ತು ಹಲವು ಕಾರ್ಯಕರ್ತರನ್ನು ಅಕ್ರಮವಾಗಿ ಬಂಧಿಸಿ ಅಗೌರವದಿಂದ ನಡೆಸಿಕೊಂಡಿರುವ ಪೊಲೀಸ್ ಇಲಾಖೆಯ ಡಿಸಿಪಿ ಲಕ್ಷ್ಮೀ ಪ್ರಸಾದ ಅವರನ್ನು ಕೂಡಲೇ ಅಮಾನತ್ತಿನಲ್ಲಿಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಕರವೇ ಪ್ರಮುಖರಾದ ಬಸನಗೌಡ ಪೋ.ಪಾಟೀಲ, ಹನುಮಂತ ಬೆಸ್ತರ, ಸಂಜಯ ಖಟವಟೆ, ಪ್ರಕಾಶ ಮನ್ನೆರಾಳ, ಪ್ರಶಾಂತ ನಾಯಕ, ರಮೇಶ ಹಾಲವರ್ತಿ, ನಿಂಗಪ್ಪ ಮೂಗಿನ, ಭುವನೇಶ್ವರಿ ಮೊಟಗಿ, ಶಿವಕುಮಾರ ಗೌಡರ, ಆನಂದ ಎಲಿಗಾರ, ನೂರಬಾಷಾ ಕವಲೂರು, ಶರಣಯ್ಯ ಹಿರೇಮಠ, ಮಂಜುನಾಥ ಇನಾಮದಾರ, ಶ್ರೀಕಾಂತ ಗುರುವಿನ್, ಗುರುಸಿದ್ದಪ್ಪ ಬೇಳೂರು, ಬಸವರಾಜ ಚಿಕೆನಕೊಪ್ಪ, ಶಶಿ ಬೀಡನಾಳ, ಈರಣ್ಣ ಗುಡಿಗೇರ, ಚಂದ್ರು ಭಜಂತ್ರಿ, ಸಂದೀಪ ಭಜಂತ್ರಿ, ಪ್ರಜ್ವಲ ಬೆಸ್ತರ, ಹನುಮೇಶ ನಾಯಕ, ಸೊಹೇಲ್ ಎಸ್.ಪಿ ಮುಂತಾದವರಿದ್ದರು.

# ಕುವೆಂಪು ಆದರ್ಶಗಳನ್ನು ಮೈಗೂಡಿಸಿಕೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿಜಯಸಾಕ್ಷಿ ಸುದ್ದಿ, ರಾಷ್ಟ್ರ ಕವಿ ಕುವೆಂಪು ನಾಡಿಗೆ ವಿಶ್ವಮಾನವ ಸಂದೇಶ ಸಾರಿದ ಮಾಹಾನ್ ವ್ಯಕ್ತಿ. ಇವರ ಆದರ್ಶಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಸಮೀಪದ ಅಸುಂಡಿ ಕುವೆಂಪು ಶತಮಾನೋತ್ಸವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಕುವೆಂಪು ಅವರ 119ನೇ ಜನ್ಮದಿನಾಚರಣೆ ಅಂಗವಾಗಿ ಅವರ ಪುತ್ಥಳಿಗೆ ಪೂಜೆ ಸಲ್ಲಿಸಿ ಮಾತನಾಡಿದರು.

ಕುವೆಂಪು ವಿಶ್ವಪಥ ಮನುಜ ಪಥ ಎಂಬ ವಾಕ್ಯಗಳೊಂದಿಗೆ ಜಾತಿ–ಮತ, ಮೌಢ್ಯಗಳನ್ನು ಬಿಟ್ಟು ಬನ್ನಿ ಎಂದು ಕರೆ ನೀಡುವ ಮೂಲಕ ಮನುಕುಲಕ್ಕೆ ಒತ್ತು ನೀಡಿದವರು. ಪಕೃತಿಯನ್ನು ಪ್ರೀತಿಸಬೇಕು, ಸ್ತ್ರೀಯರನ್ನು ಗೌರವಿಸಬೇಕು ಎಂಬ ತತ್ವಗಳನ್ನು ಸಾರಿದವರು ಎಂದರು.

ಹರ್ತಿ ಕ್ಲಸ್ಟರ್ ಸಿಆರ್‌ಪಿ ಇಮಾಮಸಾಬ ಗಾಡಗೋಳಿ, ಶಾಲಾ ಪ್ರಧಾನ ಗುರು ಬಿ.ಡಿ. ಮಾದರ ಮತ್ತು ಶಾಲಾ ವಿದ್ಯಾರ್ಥಿಗಳು ಇದ್ದರು.

# ಯುವ ವಕೀಲರಿಗೆ ತತ್ವಜ್ಞಾನಿಯಂತೆ ಚಿಂತನೆ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನಿನ ಅಜ್ಞಾನಕ್ಕೆ ಯಾವುದೇ ಕ್ಷಮೆ ಇಲ್ಲ ಹಾಗೂ ಕಾನೂನಿನಿಂದ ತಪ್ಪಿಸಿಕೊಳ್ಳಲು ಅದು ಕಾರಣವಾಗುವುದಿಲ್ಲ. ಆದಕಾರಣ ಕಾನೂನು ವಿದ್ಯಾರ್ಥಿಗಳು ಕಾನೂನಿನ ಪರಿಣಾಮಗಳ ಬಗ್ಗೆ ಸಾಮಾನ್ಯ ಜನರಲ್ಲಿ ಅರಿವು ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ನಗರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಗುರುವಾರ ಜರುಗಿದ ಕಾಲೇಜು ಒಕ್ಕೂಟ, ಕ್ರೀಡಾ, ಸಾಂಸ್ಕೃತಿಕ ಹಾಗೂ ಎನ್.ಎಸ್.ಎಸ್ ಘಟಕಗಳ ಉದ್ಘಾಟನಾ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ದಶಕಗಳ ಹಿಂದೆ ಕಾನೂನು ಪದವಿ ಅಧ್ಯಯನ ಮಾಡುವವರು ಪರಿಣಿತಿ ಸಾಧಿಸಿ ಕೇಸು ಗೆಲ್ಲುವ ಉದ್ದೇಶ ಹೊಂದಿರುತ್ತಿದ್ದರು. ಆದರೆ, ಕಾನೂನು ವಿದ್ಯಾರ್ಥಿಗಳು ಕಾನೂನು ಪದವಿ ಗಳಿಸಿ ಉನ್ನತ ಸ್ಥಾನಕ್ಕೆ ಹೋಗುವ ಆಕಾಂಕ್ಷೆ ಹೊಂದಿರಬೇಕು. ಕಕ್ಷಿದಾರರ ಪ್ರತಿನಿಧಿಸುವಿಕೆ, ಸಲಹೆ ನೀಡುವಿಕೆ ಸೇರಿದಂತೆ ನ್ಯಾಯವಾದಿಗಳ ಕಾರ್ಯವ್ಯಾಪ್ತಿ ವಿಸ್ತಾರಗೊಂಡಿದೆ. ಈ ದಿಸೆಯಲ್ಲಿ ಕಾನೂನು ವಿದ್ಯಾರ್ಥಿಗಳು ಪ್ರತಿಭಾ ಸಂಪನ್ನರಾಗಿ ಕಾನೂನು ವಿದ್ಯಾಭ್ಯಾಸ ನಡೆಸಬೇಕು ಎಂದರು.




ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ಡಾ. ಸುರೇಶ ವಿ. ನಾಡಗೌಡರ ಮಾತನಾಡಿ, ಸಮಾಜದಲ್ಲಿ ವಕೀಲರ ಪಾತ್ರ ಬಹಳ ಪ್ರಮುಖವಾದದ್ದು, ವಿದ್ಯಾರ್ಥಿಗಳು ಕಾನೂನಿನ ಪರಿಣಿತಿ, ಆತ್ಮವಿಶ್ವಾಸವನ್ನು ಹೊಂದಿದ್ದಲ್ಲಿ ಕಾನೂನಿನ ವೃತ್ತಿಯಲ್ಲಿ ಯಶಸ್ಸನ್ನು ಸಾಧಿಸಬಹುದೆಂದು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಬಿ. ಜಿ. ಶೆಲ್ಲಿಕೇರಿ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಅವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ನಮ್ಮ ಮಹಾವಿದ್ಯಾಲಯದಲ್ಲಿ ಪಠ್ಯ, ಪಠ್ಯೇತರ, ಹಾಗೂ ಸಹಪಠ್ಯ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಮಹಾವಿದ್ಯಾಲಯದ ಸರ್ವತೋಮುಖ ಅಭಿವೃದ್ಧಿಯಲ್ಲಿ ಪಾತ್ರ ವಹಿಸಬೇಕು ಎಂದರು.

ಕು. ಆಕಾಶ ಭದ್ರಾಪುರ ಪ್ರಾರ್ಥಿಸಿದರು, ಮಹಾವಿದ್ಯಾಲಯದ ಪ್ರಾಂಶುಪಾಲರಾದ ಜೈ ಹನುಮಾನ್. ಹೆಚ್.ಕೆ ಅವರು ಸ್ವಾಗತಿಸಿದರು. ಸಹಾಯಕ ಪ್ರಾಧ್ಯಾಪಕರು ಮತ್ತು ಐ.ಕ್ಯೂ.ಎ.ಸಿ. ಸಂಯೋಜಕರಾದ ಡಾ|| ವಿಜಯ ವಿ. ಮುರದಂಡೆ ಅತಿಥಿಗಳನ್ನು ಪರಿಚಯಿಸಿದರು. ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ ಸಿ. ಬಿ. ರಣಗಟ್ಟಿಮಠ ಅವರು ವಿದ್ಯಾರ್ಥಿ ಒಕ್ಕೂಟದ ಸದಸ್ಯರಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ವಿದ್ಯಾರ್ಥಿ ಒಕ್ಕೂಟದ ಪ್ರಧಾನ ಕಾರ್ಯದರ್ಶಿಯಾದ ಕುಮಾರಿ. ನೂರ್ ಫಾತೀಮಾ ಎಲ್. ಅಕ್ಕಿ ವಂದಿಸಿದರು.

ವೇದಿಕೆಯ ಮೇಲೆ ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಕಾರ್ಯಧ್ಯಕ್ಷರಾದ ಎಸ್ ಎ ಮಾನ್ವಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಬೋಧಕ_ಬೋಧಕೇತರ ವೃಂದ ಹಾಗೂ ಎಲ್ಲ ವಿದ್ಯಾರ್ಥಿಗಳು ಹಾಜರಿದ್ದರು.

ಕಕ್ಷಿದಾರರು ಮತ್ತು ನ್ಯಾಯವಾದಿಗಳ ನಡುವೆ ಉತ್ತಮ ಸಂಬಂಧ ಇರಬೇಕು. ನ್ಯಾಯವಾದಿಗಳ ಜ್ಞಾನಕ್ಕೆ ಯಾವುದೇ ಪರಿಮಿತಿ ಇಲ್ಲ. ಆತ ರಾಷ್ಟ್ರದ ಸಂಪೂರ್ಣ ಜ್ಞಾನ ಹೊಂದಿರಬೇಕು. ತತ್ವಜ್ಞಾನಿಯಂತೆ ಚಿಂತನೆ ನಡೆಸಬೇಕು. ಇಂದಿನ ಸಮಾಜದಲ್ಲಿ ಮೌಲ್ಯಗಳ ಕುಸಿತದಿಂದ ಪ್ರಕರಣಗಳೂ ಹೆಚ್ಚಿ ತೀರ್ಪುಗಳು ಇತ್ಯರ್ಥವಾಗಲು ವಿಳಂಬವಾಗುತ್ತಿವೆ. ಕೇಸುಗಳು ತ್ವರಿತ ಗತಿಯಲ್ಲಿ ವಿಲೇವಾರಿಯಾಗುವ ನಿಟ್ಟಿನಲ್ಲಿ ನ್ಯಾಯವಾದಿಗಳು ಹೆಚ್ಚು ಗಮನ ಹರಿಸಬೇಕಾಗಿದೆ.

**–ವೈಶಾಲಿ.ಎಮ್.ಎಲ್**. ಜಿಲ್ಲಾಧಿಕಾರಿಗಳು, ಗದಗ.



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ಅಂಗವಾಗಿ 'ವಿಶ್ವ ಮಾನವ ದಿನಾಚರಣೆ' ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಿಆರ್‌ಪಿ ರವಿ ಎಂ.ಹೆಬ್ಬಳ್ಳಿ, ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ, ಶಾಲೆಯ ಸಮಸ್ತ ಶಿಕ್ಷಕ/ಶಿಕ್ಷಕಿಯರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.


ಕರ್ನಾಟಕ ಸರ್ಕಾರ

**ಗದಗ ಬೆಟಗೇರಿ ನಗರಸಭೆ ಕಾರ್ಯಾಲಯ–582101, ಜಿಲ್ಲಾ ಗದಗ ರಾಜ್ಯ : ಕರ್ನಾಟಕ**

ದೂರವಾಣಿ : 08372–259932 ಇ–ಮೇಲ್ : ka.gadagbetagericmc@gmail.com

ಸಂಖ್ಯೆ : ಗಬೆನಸ/ತಾಂತ್ರಿಕ/ಸ್ವಭಾಮಿ 2.0 /2023–24 ದಿನಾಂಕ : 28–12–2023

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಸ್ವಚ್ಛ ಭಾರತ್ ಮಿಷನ್ 2.0 ಯೋಜನೆ (ನಗರ) ಯೋಜನೆ ಅನುದಾನದಡಿ ಸಾರ್ವಜನಿಕ ಶೌಚಾಲಯ ಮತ್ತು ಸಾರ್ವಜನಿಕ ಮೂತ್ರಾಲಯಗಳನ್ನು ನಿರ್ಮಿಸುವ ಸಂಬಂಧ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಕೆಪಿಪಿಪಿ ಪೋರ್ಟಲ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ಬಿಡ್ ಸಲ್ಲಿಸಲು ಇಚ್ಛೆಯುಳ್ಳವರು ಇ ಪೋರ್ಟಲ್ ಮೂಲಕ ಬಿಡ್ ಸಲ್ಲಿಸಬಹುದು. ಇ ಎಂ ಡಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಪಿಪಿಪಿ ಪೋರ್ಟಲ್ ವೆಬ್‌ಸೈಟ್ ನಿಂದ https://kppp.karnataka.gov.in ಡೌನಲೋಡ್ ಮಾಡಿಕೊಳ್ಳಲು ತಿಳಿಸಿದೆ.

| ಕ್ರ. ಸಂ | ಕಾಮಗಾರಿಯ ಹೆಸರು | ವರ್ಗ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 1 | DMA/2023-24/BD/WORK_INDENT10609 Construction Of Urinal Infront of gouri Shnakar Lodge At Ward No 26 CMC Limits | ಇತರೆ ವರ್ಗಕ್ಕೆ | **5.00** |
| 2 | DMA/2023-24/BD/ WORK_INDENT10607 Construction of Urinal In Near Infront Of Bus Stop SM Krushna Nagar At Ward No 01 | ಎಸ್ ಟಿ ವರ್ಗಕ್ಕೆ | **5.00** |
| 3 | DMA/2023-24/BD/ WORK_INDENT10603 Construction of Urinal In Near Hathalgeri Naka At Ward No 28 CMC Limits. | ಇತರೆ ವರ್ಗಕ್ಕೆ | **5.00** |
| 4 | DMA/2023-24/BD/ WORK_INDENT10601 Construction Of Urinal in Near Veernarayan Temple At Ward No 19 CMC Limits. | ಎಸ್ ಸಿ ವರ್ಗಕ್ಕೆ | **5.00** |
| 5 | DMA/2023-24/BD/ WORK_INDENT10599 Construction Of Urinal in Hathikal Koot At Ward No 26 CMC Limits. | ಇತರೆ ವರ್ಗಕ್ಕೆ | **5.00** |
| 6 | DMA/2023-24/BD/WORK_INDENT10573 Construction Of Urinal in Hudco Colony Mulagund Road at Ward No 35 CMC Limits. | ಎಸ್ ಸಿ ವರ್ಗಕ್ಕೆ | **5.00** |
| 7 | DMA/2023-24/BD/ WORK_INDENT10570 Construction Of Urinls in Betageri Bus Stand At CMC Limit | ಇತರೆ ವರ್ಗಕ್ಕೆ | **5.00** |
| 8 | DMA/2023-24/BD/ WORK_INDENT10566 Construction Of Public Toilet In Betageri Bus Stand At CMC | ಇತರೆ ವರ್ಗಕ್ಕೆ | **20.00** |

ಭರ್ತಿ ಮಾಡಿದ ಟೆಂಡರ್‌ಗಳನ್ನು ಸಲ್ಲಿಸುವ ಕೊನೆಯ ದಿನಾಂಕ : **04–01–2024** ಸಾಯಂಕಾಲ 4.30 ಗಂಟೆ
ಸ್ವೀಕೃತಗೊಂಡ ಟೆಂಡರ್‌ಗಳ ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **05–01–2024** ಸಾಯಂಕಾಲ 5.00 ಗಂಟೆ

**ಸಹಿ/– (ಗಂಗಪ್ಪ ಎಂ)ಕೆಎಎಸ್**
**ಪೌರಾಯುಕ್ತರು,**
**ನಗರಸಭೆ, ಗದಗ–ಬೆಟಗೇರಿ**

**ಸಹಿ/– (ಉಷಾ ಮಹೇಶ ಎಂ. ದಾಸರ)**
**ಅಧ್ಯಕ್ಷರು,**
**ನಗರಸಭೆ, ಗದಗ–ಬೆಟಗೇರಿ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/410/2023–24


# ಭಾರತ ವಿದ್ಯಾರ್ಥಿ ಫೆಡರೇಷನ್‌ಗೆ 54ರ ಸಂಭ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಎಸ್‌ಎಫ್‌ಐ ಕಛೇರಿಯಲ್ಲಿ ಎಸ್‌ಎಫ್‌ಐನ 54ನೇ ಸಂಸ್ಥಾಪನಾ ದಿನಾಚರಣೆಯನ್ನು ಧ್ವಜಾರೋಹಣ ಮಾಡುವ ಮೂಲಕ ಆಚರಿಸಲಾಯಿತು.

ಧ್ವಜಾರೋಹಣವನ್ನು ಎಸ್‌ಎಫ್‌ಐ ರಾಜ್ಯ ಪದಾಧಿಕಾರಿ ಗಣೇಶ ರಾಠೋಡ್ ನೇರವೇರಿಸಿ ಮಾತನಾಡಿ, ದಮನಿತರ ಧ್ವನಿಯಾಗಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಸಂಘಟನೆ ಕಾರ್ಯ ಮಾಡುತ್ತಿದೆ.



ಕಳೆದ 54 ವರ್ಷಗಳಿಂದ ವಿದ್ಯಾರ್ಥಿ ಹಕ್ಕುಗಳ ರಕ್ಷಣೆಗೆ, ಶಿಕ್ಷಣದ ಉಳಿವಿಗಾಗಿ ನಿರಂತರ ಸೈದ್ಧಾಂತಿಕ ಮತ್ತು ಶೈಕ್ಷಣಿಕ ಚಳುವಳಿಯನ್ನು ಮುಂದುವರೆಸಿದೆ. ಸಮಾನತೆಯ ಶಿಕ್ಷಣಕ್ಕಾಗಿ ಮತ್ತು ಸಮಾಜವಾದಕ್ಕಾಗಿ ನಿರಂತರ ಹೋರಾಟ ಮಾಡುತ್ತಿದೆ ಎಂದರು.

ಕಾರ್ಮಿಕ ಮುಖಂಡ ಮಹೇಶ್ ಹಿರೇಮಠ ಮಾತನಾಡಿ, ನೀವೆಲ್ಲಾ ರೈತ ಕಾರ್ಮಿಕ, ಕೃಷಿ ಕೂಲಿಕಾರರ ಮಕ್ಕಳು. ನಿಮ್ಮ ಹಕ್ಕುಗಳಿಗಾಗಿ ನಡೆಯುವ ಚಳುವಳಿಯ ಜೊತೆ ನಿಲ್ಲಬೇಕು. ಕಾರ್ಮಿಕರು ಸದಾ ನಿಮ್ಮ ಬೆಂಬಲಕ್ಕೆ ಇರುತ್ತೇವೆ.

ಕಾರ್ಮಿಕ ವಿದ್ಯಾರ್ಥಿ ವಿರೋಧಿ ನೀತಿಗಳನ್ನು ತಡೆಯಲು ಎಸ್‌ಎಫ್‌ಐ ಸಂಘಟನೆಯ ಪಾತ್ರ ಮಹತ್ತದ್ದು ಎಂದರು.

ಈ ಸಂದರ್ಭದಲ್ಲಿ ಎಸ್‌ಎಫ್‌ಐನ ಮುಖಂಡರಾದ ಚಂದ್ರು ರಾಠೋಡ್, ಶರಣು ಎಂ, ಸುಮಾ, ಮಂಜುಳಾ, ಸರಳಾ, ಸುಜಾತಾ, ಮುಸ್ಕಾನ್, ನಿವೇದಿತಾ, ಶ್ರೇಯಾ, ವೀಣಾ, ರೋಹಿಣಿ, ಅಶ್ವಿನಿ, ರಕ್ಷಿತಾ, ಶ್ರೀದೇವಿ ಮುಂತಾದವರಿದ್ದರು.

## ಅಯ್ಯಪ್ಪಸ್ವಾಮಿ ಮಹಾಪೂಜೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಶಬರೀಶ ಅಯ್ಯಪ್ಪಸ್ವಾಮಿ ಸನ್ನಿಧಾನ ಸೇವಾ ಸಮಿತಿ ನಾಗಾವಿ ಗ್ರಾಮದಲ್ಲಿ ಡಿ.30ರಂದು ಮಧ್ಯಾಹ್ನ1 ಗಂಟೆಗೆ ಅನ್ನ ಸಂತರ್ಪಣೆ ಕಾರ್ಯಕ್ರಮ, ಸಾಯಂಕಾಲ ಗುರುನಾಥ ಗೋವಿಂದಭಟ್ಟರ ಹಾಗೂ ಶರೀಪ ಶಿವಯೋಗಿಗಳ ಗದ್ದುಗೆಯಲ್ಲಿ ರಾತ್ರಿ 7.30ಕ್ಕೆ ಅಯ್ಯಪ್ಪಸ್ವಾಮಿಯ ಮಹಾಪೂಜೆ ಜರುಗಲಿದೆ. ಅಯ್ಯಪ್ಪ ಭಕ್ತರು ಆಗಮಿಸಿ, ಸ್ವಾಮಿಯ ಕೃಪೆಗೆ ಪಾತ್ರರಾಗಬೇಕು ಎಂದು ಶಿವಾನಂದ ಗುರುಸ್ವಾಮಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಿಗ್ ಕಾರ್ಮಿಕರ ನೋಂದಣಿ ಆರಂಭ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುವ ಗಿಗ್ ಕಾರ್ಮಿಕರಿಗೆ ಮೊದಲ ಬಾರಿಗೆ ವಿಮಾ ಯೋಜನೆ ಜಾರಿಯಾಗಿದ್ದು, ಎಲ್ಲಾ ಅರ್ಹ ಗಿಗ್ ಕಾರ್ಮಿಕರು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಾಯಿಸಬಹುದೆಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಮಾ ಸೌಲಭ್ಯವು ಕರ್ತವ್ಯದಲ್ಲಿರುವಾಗ, ಇಲ್ಲದಿರುವಾಗ ಸಂಭವಿಸುವ ಅಪಾಘಾತಗಳಿಗೂ ಅನ್ವಯಿಸಲಿದೆ. ಈ ಯೋಜನೆ ಸಂಪೂರ್ಣ ಉಚಿತವಾಗಿದ್ದು, ಯಾವುದೇ ರೀತಿಯ ಪ್ರೀಮಿಯಂ ಪಾವತಿಸುವ ಅಗತ್ಯ ಇರುವುದಿಲ್ಲ. ಸ್ವಿಗ್ಗಿ, ಜೊಮಾಟೊ ಅಂತಹ ಸಂಸ್ಥೆಗಳಲ್ಲಿ ಫುಡ್ ಡೆಲಿವರಿ ಮಾಡುವ ಹಾಗೂ ಇ-ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಫ್‌ಕಾರ್ಟ್, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೊ ಬಿಗ್ ಬಾಸ್ಕೆಟ್, ಡೊಮಿನೊಸ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಸಿಕೊಂಡ ಎಲ್ಲಾ ಅಸಂಘಟಿತ ಗಿಗ್ ಕಾರ್ಮಿಕರಿಗೆ ಈ ಯೋಜನೆ ಲಭ್ಯವಿದೆ.

ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಅಧಿಕಾರಿ ಧಾರವಾಡ, ಉಪ ವಿಬಾಗ 1 & 2 ಹಾಗೂ ಹುಬ್ಬಳ್ಳಿಯ ಹಿರಿಯ ಕಾರ್ಮಿಕ ನಿರೀಕ್ಷಕರ ಕಛೇರಿ 1, 2, 3 ಮತ್ತು 4ನೇ ವೃತ್ತ ಹುಬ್ಬಳ್ಳಿ, ಧಾರವಾಡದಲ್ಲಿನ ಹಿರಿಯ ಕಾರ್ಮಿಕ ನೀರಿಕ್ಷಕರ ಕಛೇರಿ 1 ಮತ್ತು 2ನೇ ವೃತ್ತ, ಧಾರವಾಡ ಹಾಗೂ ಕಾರ್ಮಿಕ ನೀರಿಕ್ಷಕರ ಕಛೇರಿ ಕಲಘಟಗಿಯನ್ನು ಸಂಪರ್ಕಿಸಬಹುದು.

### 'ವಿಶ್ವ ಮಾನವ ದಿನಾಚರಣೆ' ಕಾರ್ಯಕ್ರಮದಲ್ಲಿ ಬಿಇಓ ಜಿ.ಎಂ. ಮುಂದಿನಮನಿ ಅಭಿಮತ

# ಸಮಾಜವನ್ನು ಜಾಗೃತಗೊಳಿಸಿದ ಕವಿ ಕುವೆಂಪು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರಕವಿ ಕುವೆಂಪು ಅವರು ತಮ್ಮ ಸಾಹಿತ್ಯದ ಮೂಲಕ ಮಾನವನನ್ನು ವಿಶ್ವ ಮಾನವನ್ನಾಗಿಸುವ ಚೇತನ ಶಕ್ತಿಯಾಗಿ ಕನ್ನಡಿಗರ ಹೃದಯದಲ್ಲಿ ನೆಲೆಸಿದ್ದಾರೆ ಎಂದು ಬಿಇಓ ಜಿ.ಎಂ. ಮುಂದಿನಮನಿ ಅಭಿಪ್ರಾಯಪಟ್ಟರು.

ಅವರು ಕಸಾಪ ತಾಲೂಕು ಘಟಕದಿಂದ ಶುಕ್ರವಾರ ರಾಮಗಿರಿಯ ಜಿ.ಎಫ್. ಉಪನಾಳ ಸರ್ಕಾರಿ ಪ್ರೌಢಶಾಲೆಯಲ್ಲಿ ರಾಷ್ಟ್ರಕವಿ ಕುವೆಂಪು ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ 'ವಿಶ್ವ ಮಾನವ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಗದ-ಯಗದ ಕವಿ ಕುವೆಂಪು ಅವರು ತಮ್ಮ ಸಾಹಿತ್ಯದ ಮೂಲಕ ಕನ್ನಡ ಸಾರಸ್ವತ ಲೋಕವನ್ನು ಶ್ರೀಮಂತಗೊಳಿಸಿದ ಮೇರು ಶಿಖರವಾಗಿದ್ದಾರೆ. ಅವರು ನವೋದಯ ಸಾಹಿತ್ಯದ ಸಾಮಾಜಿಕ, ಸಾಂಸ್ಕೃತಿಕ, ಪ್ರಾಕೃತಿಕ ಮತ್ತು ವೈಚಾರಿಕ ಸಮಾಜದ ಎಲ್ಲ ರಂಗದ ವಿಮರ್ಶೆ ಮೂಲಕ ಸಮಾಜವನ್ನು ಜಾಗೃತಗೊಳಿಸುವ ಕಾರ್ಯ ಮಾಡಿದ್ದಾರೆ ಎಂದರು.

ಹುಲ್ಲೂರಿನ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾದ್ಯಾಯ ಕೆ.ವಾಯ್. ಮೇಲಿನಮನಿ, ಶಿಕ್ಷಕ ಎಸ್.ಡಿ. ಲಮಾಣಿ ವಿಶ್ವ ಮಾನವತೆ ಹಾಗೂ ಕುವೆಂಪು ಕುರಿತು ಉಪನ್ಯಾಸ ನೀಡಿದರು. ಕುವೆಂಪು ಅವರ ಸಾಹಿತ್ಯ ಕ್ಷೇತ್ರ ಅತ್ಯಂತ ವಿಸ್ತಾರವಾಗಿದೆ. ಕವನ, ಕಥೆ, ಕಾದಂಬರಿ, ನಾಟಕ, ವಿಮರ್ಶೆ ಎಲ್ಲ ಹಂತದ ಸಾಹಿತ್ಯ ಸೇವೆಯ ಜತೆಗೆ ರಾಮಾಯಣದರ್ಶನಂ ಮಾಹಾಕಾವ್ಯದ ಮೂಲಕ ಮೇರು ಕವಿಯಾಗಿದ್ದಾರೆ. ಮಕ್ಕಳು, ಯುವಕರು ದೇಶದ ಆಸ್ತಿಯಾಗಿದ್ದು ತಾಯಂದಿರು ಮಕ್ಕಳಿಗೆ ಉತ್ತಮ ಪರಿಸರ, ಶಿಕ್ಷಣ, ಸಂಸ್ಕಾರ ಕಲ್ಪಿಸಬೇಕು. ಇಂದಿನ ಸ್ಫರ್ಧಾತ್ಮಕ ಯುಗದಲ್ಲಿ ಯುವಕರು ಏಕಾಗ್ರತೆ, ಶ್ರದ್ಧೆ, ಭಕ್ತಿಯಿಂದ ತಪಸ್ಸಿನ ರೀತಿಯಲ್ಲಿ ಶಿಕ್ಷಣದ ಹಂತವನ್ನು ಪೂರೈಸಬೇಕು. ಅಂದಾಗ ಮಾತ್ರ ಸುಂದರ ಬದುಕು ಕಟ್ಟಿಕೊಳ್ಳಲು ಮತ್ತು ಹೆತ್ತವರಿಗೆ, ಸಮಾಜಕ್ಕೆ ಕೀರ್ತಿ ತರಲು ಸಾಧ್ಯವಾಗುತ್ತದೆ. ಕುವೆಂಪು ಅವರ ಜೀವನ ಮೌಲ್ಯ, ವಿಚಾರ, ಚಿಂತನೆಗಳನ್ನು ಅರಿತುಕೊಳ್ಳುವ ಮೂಲಕ ವಿಶ್ವಮಾನವರಾಗುವತ್ತ ಚಿತ್ತ ಹರಿಸಬೇಕು ಎಂದರು.




ಈ ವೇಳೆ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ದಕ್ಷಿಣ ಭಾರತ ವಲಯಕ್ಕೆ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಶಿಕ್ಷಣ ಇಲಾಖೆ ಮತ್ತು ಕಸಾಪದಿಂದ ಸನ್ಮಾನಿಸಲಾಯಿತು. ಗ್ರಾ.ಪಂ ಅಧ್ಯಕ್ಷೆ ಅಡಿವೆಕ್ಕ ಬೆಟಗೇರಿ ರಾಮಗಿರಿ ಪ್ರೌಢಶಾಲೆಯಲ್ಲಿ ಕಸಾಪ ವಿದ್ಯಾರ್ಥಿ ಘಟಕ ಉದ್ಘಾಟಿಸಿದರು. ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕ ನುಡಿದರು. ಮುಖ್ಯ ಶಿಕ್ಷಕಿ ಜೆ.ಎಸ್. ಹಿರೇಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅತಿಥಿಗಳಾಗಿ ಎಸ್‌ಡಿಎಂಸಿ ಅಧ್ಯಕ್ಷ ಭೀಮಪ್ಪ ಯಂಗಾಡಿ, ಹೆಚ್.ಎಂ. ಗುತ್ತಲ, ಪಿ.ಸಿ. ಪಟ್ಟೇದ, ಕೆ.ಸಿ. ಹನ್ನೀರ, ಎಲ್.ಬಿ. ಮುದೇನೂರ, ಶಶಿಕುಮಾರ ಹೆಚ್, ಎಲ್.ಐ. ದಾನಸೂರ, ಎಂ.ಎಸ್. ಚಾಲಕಬ್ಬಿ ಮತ್ತಿತರರಿದ್ದರು. ಮೃತ್ರಾದೇವಿ ಹಿರೇಮಠ, ನಾಗರಾಜ ಪೂಜಾರ, ನಾಗರಾಜ ಮಜ್ಜಿಗುಡ್ಡದ ನಿರ್ವಹಿಸಿದರು.

ತಾಲೂಕಾ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲು ಕಳಸಾಪುರ ಕುವೆಂಪು ಅವರ ಹಾಡುಗಳ ಪ್ರಸ್ತುತಿ ಮೂಲಕ ಕುವೆಂಪು ಜನ್ಮದಿನಕ್ಕೆ ಗೀತ ನಮನ ಸಲ್ಲಿಸಿದರು.

> ಕುವೆಂವು ಅವರು ಸಮಾಜಕ್ಕೆ ನೀಡಿದ ಚಿಂತನೆ, ಆದರ್ಶ, ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಜಾತಿ-ಬೇಧ ಮರೆತು ಸ್ನೇಹ, ಸೌಹಾರ್ದತೆ, ಭ್ರಾತೃತ್ವದಿಂದ ಬಾಳೋಣ. ಅಂದಾಗ ಮಾತ್ರ ಮನುಜ ಮತ-ವಿಶ್ವಪಥದ ಅವರ ಚಿಂತನೆ ಮತ್ತು ವಿಶ್ವಮಾನವ ದಿನಾಚರಣೆ ಅರ್ಥಪೂರ್ಣವಾಗುತ್ತದೆ ಎಂದು ಬಿಇಓ ಜಿ.ಎಂ. ಮುಂದಿನಮನಿ ನುಡಿದರು.

# ಕಲ್ಲಡ್ಕ ಪ್ರಭಾಕರ ಭಟ್‌ರನ್ನು ಬಂಧಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಹಿಳೆಯರ ಬಗ್ಗೆ ಕೀಳು ಹೇಳಿಕೆ ನೀಡಿದ ಕಲ್ಲಡ್ಕ ಪ್ರಭಾಕರ ಭಟ್ ತನ್ನ ಬಾಯಿ ಚಪಲಕ್ಕೆ, ಹೊಟ್ಟೆಪಾಡಿಗಾಗಿ ಇಂತಹ ಹೇಳಿಕೆಗನ್ನು ನೀಡುವುದೇ ವೃತ್ತಿ ಮಾಡಿಕೊಂಡಿರುವಂತಿದೆ. ಈ ಆರೋಪಿಯನ್ನು ಬಂಧಿಸಲು ಸರ್ಕಾರ ಮುಂದಾಗಬೇಕು ಎಂದು ಪುರಸಭೆ ಸದಸ್ಯ ರಾಜು ಸಾಂಗ್ಲೀಕರ ಹೇಳಿದರು.



ಕೆಲ ದಿನಗಳ ಹಿಂದೆ ಮುಸ್ಲಿಂ ಸಮುದಾಯದ ಮಹಿಳೆಯರ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡಿದ ಕಲ್ಲಡ್ಕ ಪ್ರಭಾಕರ ಭಟ್ ಬಂಧನಕ್ಕೆ ಒತ್ತಾಯಿಸಿ ಪಟ್ಟಣದ ಅಂಜುಮನ್ ಇಸ್ಲಾಂ ಕಮಿಟಿಯಿಂದ ಶುಕ್ರವಾರ ತಹಸೀಲ್ದಾರ್ ಮೂಲಕ ಸಿಎಂಗೆ ಮನವಿ ನೀಡಿ ಮಾತನಾಡಿದರು.

ಮಹಿಳೆಯರು ಎಂದರೆ ದೇಶದಲ್ಲಿ ಪೂಜ್ಯ ಭಾವನೆ ಇರಬೇಕು ಎಂಬ ಪಾಠ, ಪ್ರವಚನಗಳನ್ನು ಕೇಳುತ್ತಾ ಮಹಿಳೆಯರನ್ನು ಗೌರವದಿಂದ ಕಾಣುವ ಗುಣವನ್ನು ಮೈಗೂಡಿಸಿಕೊಂಡಿರುವ ದೇಶ ನಮ್ಮದು. ಆದರೆ ಮುಸ್ಲಿಂ ಸಮುದಾಯದ ಮಹಿಳೆಯರ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡಿದ ಪ್ರಭಾಕರ ಭಟ್ ಒಬ್ಬ ಮಹಿಳಾ ವಿರೋಧಿ ಮನಸ್ಥಿತಿಯವರು ಎಂಬುದಕ್ಕೆ ಸಾಕ್ಷಿಯಾಗಿದೆ ಎಂದರು.

ಸ್ಥಳೀಯ ಅಂಜುಮನ್ ಇಸ್ಲಾಂ ಕಮೀಟಿಯ ಮಾಜಿ ಕಾರ್ಯದರ್ಶಿ ದಾವಲ್ ತಾಳಿಕೋಟಿ ಮಾತನಾಡಿ, ಚುನಾವಣಾ ಪೂರ್ವದಲ್ಲಿ ಅಲ್ಪಸಂಖ್ಯಾತರ ಮತಗಳನ್ನು ಪಡೆಯಲು ಅಲ್ಪಸಂಖ್ಯಾತರ ಹಿತಕಾಯುವದಾಗಿ ಕಾಂಗ್ರೆಸ್ ವಚನ ನೀಡಿತ್ತು. ಆದರೆ ಮುಸ್ಲಿಂ ಮಹಿಳೆಯರ ಬಗ್ಗೆ ಕೆಟ್ಟದಾಗಿ ಹೇಳಿಕೆ ನೀಡಿದ ಆರೋಪಿಯ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು ಪ್ರಭಾಕರ್ ಭಟ್‌ರನ್ನು ಜೈಲಿಗೆ ಹಾಕಬೇಕಿದ್ದ ಕಾಂಗ್ರೆಸ್ ಸರ್ಕಾರವು ಆರೋಪಿಯನ್ನು ಬಂಧಿಸಲ್ಲ ಎಂಬ ಪ್ರಮಾಣಪತ್ರ ನೀಡಿದ್ದು ವಿಪರ್ಯಾಸ ಎಂದು ಅಸಮಧಾನ ವ್ಯಕ್ತಪಡಿಸಿದರು.

ಮುಖಂಡರಾದ ಫಯಾಜ ತೋಟದ, ಶಾಮೀದಸಾಬ ದಿಂಡವಾಡ ಮಾತನಾಡಿದರು. ಈ ವೇಳೆ ಅಂಜುಮನ್ ಇಸ್ಲಾಂ ಕಮೀಟಿ ಚೇರಮನ್ ಹಸನಸಾಬ ತಟಗಾರ, ಪುರಸಭೆ ವಿಪಕ್ಷ ನಾಯಕ ಮುರ್ತುಜಾ ಡಾಲಾಯತ, ನಾಸೀರಅಲಿ ಸುರಪುರ, ಬಾಷೇಸಾಬ ಮುದಗಲ್ಲ, ದಾದು ಹಣಗಿ, ಫಕ್ರುಸಾಬ ಕಾತರಕಿ, ಭಾಷೇಸಾಬ ಕರ್ನಾಚಿ ಮುಂತಾದವರಿದ್ದರು.

# ಕರವೇ ರಾಜ್ಯಾಧ್ಯಕ್ಷರ ಬಿಡುಗಡೆಗೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಹಾಗೂ ಕಾರ್ಯಕರ್ತರರನ್ನು ಶೀಘ್ರ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿ ಕರವೇ ಗದಗ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಶರಣು ಗೋಡಿ ಮಾತನಾಡಿ, ಕನ್ನಡ ನಾಡು-ನುಡಿಯ ವಿಚಾರದಲ್ಲಿ ಕರ್ನಾಟಕ ಸರ್ಕಾರ ಮಾಡಬೇಕಾಗಿರುವ ಕೆಲಸವನ್ನು ಟಿ.ಎ. ನಾರಾಯಣಗೌಡರು ಸೇರಿದಂತೆ ಕರವೇ ಕಾರ್ಯಕರ್ತರು ಮಾಡಿದ್ದಾರೆ. ಇದನ್ನು ಪೊಲೀಸರ ಮುಖಾಂತರ ಹತ್ತಿಕ್ಕುವ ಕೆಲಸವನ್ನು ರಾಜ್ಯ ಸರ್ಕಾರ ಕೈಬಿಡಬೇಕು ಮತ್ತು ಬಂಧಿತರಾಗಿರುವ ಟಿ.ಎ. ನಾರಾಯಣಗೌಡರು ಸೇರಿದಂತೆ ಕರವೇ ಕಾರ್ಯಕರ್ತರನ್ನು ಬಿಡುಗಡೆಗೊಳಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರವೇ ಕಾರ್ಯಕರ್ತರಾದ ನಿಂಗನಗೌಡ ಮಾಲಿಪಾಟೀಲ, ಚೇತನ್ ಕಣವಿ, ನಾಗೇಶ ಅಮರಾಪುರ, ಅಜಯ್ ಕಂಬಳಿ, ಜಗದೀಶ್ ತಳವಾರ, ಆಶಾ ಜೂಲಗುಡ್ಡ, ನಾಗಪ್ಪ ಅಣ್ಣಿಗೇರಿ, ಲೋಕೇಶ ಸುತಾರ, ಆನಂದ ಹೊಸಮನಿ, ಯಲ್ಲಪ್ಪ ಬೋವಿ, ಪ್ರಕಾಶ್ ಕೊಂಚಿಗೇರಿಮಠ, ಮೈನು ಮನಿಯಾರ, ಕೈಸರ್ ಮಹಮ್ಮದಅಲಿ, ಸಲೀಂ ಬೋದ್ಲಖಾನ, ಗಣೇಶ ಮೆಹವಾಡೆ, ಮುಸ್ತಾಕ್ ಡಾವಣಗೆರೆ, ಜಾಫರ್ ಕರೆಖಾಯಿ, ಮಂಜುನಾಥ ಜಬಡಿ, ಪ್ರವೀಣ್ ಬನ್ನಿಗೊಳ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸುವರ್ಣ ಸಂಭ್ರಮ ಅಂಗವಾಗಿ ಸಾಂಸ್ಕೃತಿಕ ಸಂಜೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಅನ್ನಪೂರ್ಣೇಶ್ವರಿ ಮಹಿಳಾ ವಿವಿದೋದ್ದೇಶಗಳ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವುಗಳ ಸಂಯೋಗದಲ್ಲಿ ಕರ್ನಾಟಕ ಸುವರ್ಣ ಸಂಭ್ರಮ-50ರ ಅಂಗವಾಗಿ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮವನ್ನು ನಗರದ ನಟರಂಗ ಸಾಂಸ್ಕೃತಿಕ ಕೇಂದ್ರದಲ್ಲಿ ಆಯೋಜಿಸಲಾಗಿತ್ತು.




ನಗರದ ಖ್ಯಾತ ವೈದ್ಯರಾದ ರಾಧಿಕಾ ಕುಲಕರ್ಣಿಯವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಮನಸ್ಸು ಉಲ್ಲಾಸದಿಂದ ಇರಬೇಕೆಂದರೆ ಮಕ್ಕಳು ಓದುವುದರ ಜೊತೆ-ಗೆ ಸಂಗೀತದ ಆಸಕ್ತಿಯನ್ನು ಬೆಳೆಸಿಕೊಳ್ಳಬೇಕು. ಇಂದಿನ ಮಕ್ಕಳ ಮೊಬೈಲ್ ವ್ಯಾಮೋಹ ಬಿಟ್ಟು ಇಂತಹ ಸಂಗೀತ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಬೇಕು. ಇತ್ತೀಚೆಗೆ ಗದಗ ನಗರದ ಮಕ್ಕಳು ಝೀ ಟಿವಿಯ ಸರಿಗಮಪ ಸಂಗೀತ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಿರುವುದು ಸಂತಸ ತಂದಿದೆ ಎಂದರು.

ವಿಜಯಲಕ್ಷ್ಮೀ ಮಾನ್ವಿ ಮಾತನಾಡಿ, ವೈದ್ಯರಾದ ರಾಧಿಕಾ ಕುಲಕರ್ಣಿಯವರ ಬಗ್ಗೆ ಬಹಳ ಅಭಿಮಾನವಿದೆ. ಅವರೂ ಸಹ ಭರತನಾಟ್ಯ ಕಲಾವಿದರಾಗಿದ್ದಾರೆ. ಇಂತಹ ಕಾರ್ಯಕ್ರಮಲ್ಲಿ ಪಾಲ್ಗೊಳ್ಳುವುದರಿಂದ ನಮ್ಮ ಒತ್ತಡದ ಜೀವನದಲ್ಲಿ ಮನಸ್ಸು ಉಲ್ಲಾಸಮಯವಾಗಿರುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ರೋಟರಿ ಗದಗ ಸೆಂಟ್ರಲ್‌ನ ಅಧ್ಯಕ್ಷ ವಿಜಯಕುಮಾರ ಹಿರೇಮಠ ಪಾಲ್ಗೊಂಡಿದ್ದರು. ಇದೇ ಸಂದರ್ಭದಲ್ಲಿ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ವಿಜಯಲಕ್ಷ್ಮೀ ಮಾನ್ವಿ, ವೀಣಾ ಪಾಟೀಲ, ಸ್ನೇಹಾ ವಿಜಯಕುಮಾರ ಹಿರೇಮಠ, ಶೀತಲ, ಕಲಾವತಿ ಅಲಬೂರ, ರೇಣುಕಾ ಜಾಲಿಹಾಳ, ಅಂಜನಾ ಕೋಟಿ ಉಪಸ್ಥಿತರಿದ್ದರು. ಪ್ರವೀಣ ಕರಲಿಂಗಣ್ಣವರ ಕಾರ್ಯಕ್ರಮ ನಿರೂಪಿಸಿದರು.

### ಕಿತ್ತೂರು ಚೆನ್ನಮ್ಮ ಪ್ರಶಸ್ತಿ, ವೀರ ಮಹಿಳೆ ಪ್ರಶಸ್ತಿಗೆ ಆಯ್ಕೆ ಪ್ರಕ್ರಿಯೆ

# ಅರ್ಹರಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಮಹಿಳೆಯರ ಅಭಿವೃದ್ಧಿಗಾಗಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿ ಹಾಗೂ ಸಂಸ್ಥೆಗಳಿಂದ, ಕಲೆ, ಸಾಹಿತ್ಯ, ಕ್ರೀಡೆ, ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರಿಗೆ 'ಕಿತ್ತೂರು ಚೆನ್ನಮ್ಮ ಪ್ರಶಸ್ತಿ'ಗಳನ್ನು ನೀಡಲಾಗುವುದು. ಮಹಿಳಾ ಅಭಿವೃದ್ಧಿ/ಕಲ್ಯಾಣ ಕ್ಷೇತ್ರ ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಪ್ರಾಣಾಪಾಯದಿಂದ ಪಾರು ಮಾಡಿದ ಮಹಿಳೆಯರನ್ನು ಗುರುತಿಸಿ, ಸಾಹಸ ಪ್ರದರ್ಶಿಸಿ ಹೋರಾಡಿದ ಮಹಿಳೆಗೆ 'ವೀರ ಮಹಿಳೆ ಪ್ರಶಸ್ತಿ'ಯನ್ನು ಸಹ ನೀಡಲಾಗುವುದು.



ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಿಂದ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಅವಿರತವಾಗಿ ಸೇವೆ ಸಲ್ಲಿಸುತ್ತಿರುವ ಅರ್ಹ ಸಂಸ್ಥೆಗಳು ಹಾಗೂ ಇತರೆ ಐದು ಕ್ಷೇತ್ರಗಳಾದ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಮಹಿಳೆಯರು ಕಿತ್ತೂರ ಚೆನ್ನಮ್ಮ ಪ್ರಶಸ್ತಿಗೆ ಹಾಗೂ ವೀರ ಮಹಿಳೆ ಪ್ರಶಸ್ತಿಗೆ ಅರ್ಹರಿರುವ ಮಹಿಳೆಯರಿಂದ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಸ್ವಯಂ ಸೇವಾ ಸಂಸ್ಥೆ ಹಾಗೂ ವ್ಯಕ್ತಿಗಳು ಮಹಿಳೆಯರ ಅಭಿವೃದ್ಧಿಗಾಗಿ ಕನಿಷ್ಠ 5 ವರ್ಷಗಳ ಸೇವೆ ಸಲ್ಲಿಸಿರಬೇಕು. ಪ್ರಶಸ್ತಿಗೆ ಆಯ್ಕೆ ಮಾಡುವಾಗ ಸಂಸ್ಥೆ ಹಾಗೂ ವ್ಯಕ್ತಿ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಕೈಗೊಂಡ ಕಾರ್ಯಕ್ರಗಳ ಮತ್ತು ಇತರೆ ಕ್ಷೇತ್ರಗಳಾದ ಕ್ರೀಡೆ, ಕಲೆ, ಸಾಹಿತ್ಯ, ಶಿಕ್ಷಣ ಕ್ಷೇತ್ರಗಳಲ್ಲೂ ವ್ಯಕ್ತಿಗಳು ಕೈಗೊಂಡ ಕಾರ್ಯಕ್ರಮಗಳ ನಿರ್ವಹಣೆಯ ಗುಣಮಟ್ಟವನ್ನು ಆಧಾರವಾಗಿಟ್ಟುಕೊಳ್ಳಲಾಗುತ್ತದೆ. ಕಿತ್ತೂರ ರಾಣಿ ಚೆನ್ನಮ್ಮ ಪ್ರಶಸ್ತಿಗೆ ವೇತನ ಪಡೆಯುತ್ತಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ. ಪ್ರಶಸ್ತಿಗೆ ಬರುವ ಅರ್ಜಿಗಳ ಪರಿಶೀಲನೆ ಮತ್ತು ಆಯ್ಕೆಗೆ ಸಂಬಂಧಿಸಿದಂತೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ವೀರಮಹಿಳೆ ಪ್ರಶಸ್ತಿಗೆ 18ರಿಂದ 45 ವಯೋಮಿತಿಯೊಳಗಿನ ಒಬ್ಬ ಮಹಿಳೆಯು ಆಪತ್ಕಾಲದಲ್ಲಿರುವ ಮತ್ತೊಬ್ಬ ವ್ಯಕ್ತಿಯ ಜೀವ ಕಾಪಾಡುವಲ್ಲಿ ಅಥವಾ ಪ್ರಾಣ ರಕ್ಷಿಸುವಲ್ಲಿ ತನ್ನ ಜೀವದ ಹಂಗನ್ನು ತೊರೆದು ಸಮಯ ಪ್ರಜ್ಞೆ, ಧೈರ್ಯ, ಸಾಹಸದೊಂದಿಗೆ ಅಪಾಯದಲ್ಲಿರುವ ವ್ಯಕ್ತಿಯ ಜೀವ ಕಾಪಾಡುವಂತಹ ಕಾರ್ಯವನ್ನು ಮಾಡಿದಲ್ಲಿ ಅಂತಹ ಮಹಿಳೆಯರನ್ನು ವೀರ ಮಹಿಳೆ ಎಂದು ಪರಿಗಣಿಸಲಾಗುವುದು. ವೀರ ಮಹಿಳೆ ಪ್ರಶಸ್ತಿ ಪಡೆಯುವ ಮಹಿಳೆಯು ಶೌರ್ಯ ಹಾಗೂ ಸಾಧನೆಯನ್ನು ಮಾಡಿರಬೇಕು. ಈ ಸಾಧನೆಯು ಸಾರ್ವಜನಿಕ ಗಮನಕ್ಕೆ ಬಂದಿರಬೇಕು. ಈ ಸಾಧನೆಯು ಪ್ರಶಸ್ತಿ ಪಡೆಯುವ ಹಿಂದಿನ ವರ್ಷದ ಜನವರಿ 2022ರಿಂದ ಡಿಸೆಂಬರ್ 2022ರ ಒಳಗೆ ಇರಬೇಕು. ಈ ಪ್ರಶಸ್ತಿ ಸಂಬಂಧಿಸಿದ ಮಹಿಳೆಯ ತಂದೆ/ತಾಯಿ/ಪೋಷಕರು ಅರ್ಜಿಯನ್ನು ಸಲ್ಲಿಸಬಹುದು. ವೀರ ಮಹಿಳೆ ಪ್ರಶಸ್ತಿಗಾಗಿ ರಾಜ್ಯದ ವತಿಯಿಂದ ಒಬ್ಬ ಮಹಿಳೆಗೆ ಮಾತ್ರ ರೂ. 25 ಸಾವಿರ ನಗದು ಹಾಗೂ ಪ್ರಶಸ್ತಿಪತ್ರ ನೀಡಲಾಗುವುದು. ಇದನ್ನು ಪ್ರತೀ ವರ್ಷ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನೀಡಲಾಗುವುದು.

ಅರ್ಹ ಸಂಸ್ಥೆಗಳು ಹಾಗೂ ಅರ್ಹ ವ್ಯಕ್ತಿಗಳು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ-6, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ ಗದಗ ಮತ್ತು ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಇವರಿಂದ ನಿಗದಿತ ನಮೂನೆಗಳನ್ನು ಹಾಗೂ ಷರತ್ತುಗಳ ಪ್ರತಿಗಳನ್ನು ಪಡೆದು ಜನವರಿ 10ರೊಳಗಾಗಿ ಅಲ್ಲಿಯೇ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ-ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

> ಈ ಪ್ರಶಸ್ತಿ ಪ್ರಧಾನವನ್ನು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಅಥವಾ ಸರ್ಕಾರವು ನಿಗದಿಪಡಿಸುವ ದಿನಾಂಕ ಹಾಗೂ ಸ್ಥಳಗಳಲ್ಲಿ ಏರ್ಪಡಿಸಲಾಗುವುದು. ಪ್ರಶಸ್ತಿಗೆ ಆಯ್ಕೆಯಾದ ವ್ಯಕ್ತಿಗಳು ಪ್ರಶಸ್ತಿಗಳನ್ನು ಖುದ್ದಾಗಿ ಪಡೆಯಬೇಕು ಹಾಗೂ ಸಂಘ-ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಯನ್ನು ಸಂಘದ ಪದಾಧಿಕಾರಿಗಳು ಸ್ವೀಕರಿಸಬಹುದಾಗಿದೆ.

### ರಂಭಾಪುರಿ ಜ.ವೀರಗಂಗಾಧರ ಸಮುದಾಯ ಭವನದಲ್ಲಿ 'ನೃತ್ಯ ಸಂಭ್ರಮ'

# ಭರತನಾಟ್ಯ ಸಾಂಪ್ರದಾಯಿಕ, ಶ್ರೇಷ್ಠ ನೃತ್ಯ ಕಲೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಲೆ, ಸಾಹಿತ್ಯ, ಸಂಸ್ಕೃತಿ, ಸಂಪ್ರದಾಯ, ಆಚರಣೆ, ಜಾತ್ರೆ, ಹಬ್ಬ-ಉತ್ಸವಗಳು ನಮ್ಮ ದೇಶ-ನಾಡಿನ ಸಂಸ್ಕೃತಿಯ ಪ್ರತೀಕವಾಗಿವೆ. ಅವುಗಳನ್ನು ಉಳಿಸಿ-ಪೋಷಿಸುವ ಗುರುತರ ಜವಾಬ್ದಾರಿ ಸಮಾಜದ್ದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಿಲ್ಲಾ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ.ಬಿ ಹೇಳಿದರು.



ಪಟ್ಟಣದ ವೇದಿಕಾ ಭರತನಾಟ್ಯ ಶಾಲೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶುಕ್ರವಾರ ರಂಭಾಪುರಿ ಜ.ವೀರಗಂಗಾಧರ ಸಮುದಾಯ ಭವನದಲ್ಲಿ 'ನೃತ್ಯ ಸಂಭ್ರಮ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭರತನಾಟ್ಯ ಭಾರತೀಯ ಸಾಂಪ್ರದಾಯಿಕ ಶ್ರೇಷ್ಠ ನೃತ್ಯ ಕಲೆಯಾಗಿದೆ. ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ, ದೇವರು, ಧರ್ಮ, ಗುರುಹಿರಿಯರಲ್ಲಿ ವಿಧೇಯತೆಯೊಂದಿಗೆ ಮಾನಸಿಕ, ದೈಹಿಕ ಆರೋಗ್ಯವನ್ನು ಹೆಚ್ಚಿಸುತ್ತದೆ. ಪ್ರಸ್ತುತ ಟಿವಿ, ಮೊಬೈಲ್, ಕಂಪ್ಯೂಟರ್ ನಿತ್ಯದ ಬದುಕಿನ ಅಂಗವಾಗಿರುವ ಕಾಲಘಟ್ಟದಲ್ಲಿ ಸಾಂಪ್ರದಾಯಿಕ ಕಲೆಗಳು ನಶಿಸುತ್ತಿವೆ. ಈ ಸಂದರ್ಭದಲ್ಲಿ ದೇಶದ ಸಂಪತ್ತಾದ ಮಕ್ಕಳಲ್ಲಿ ನಮ್ಮ ಸಾಂಪ್ರದಾಯಿಕ, ಕಲೆಯನ್ನು ಬೆಳೆಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಲಾಸಕ್ತ ಸಂಘ-ಸಂಸ್ಥೆಗಳಿಗೆ ಇಲಾಖೆ ಪೂರಕ ಸಹಾಯ-ಸಹಕಾರ ನೀಡುತ್ತದೆ ಎಂದರು.

ಕೆಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಸುನೀಲ ಮಹಾಂತಶೆಟ್ಟರ ಮಾತನಾಡಿ, ಮಕ್ಕಳಿಗೆ ಪಠ್ಯ ಶಿಕ್ಷಣದೊಂದಿಗೆ ಅವರಲ್ಲಿರುವ ಕಲಾಸಕ್ತಿ ಗುರುತಿಸಿ, ಪ್ರೋತಾಹಿಸುವ ಕಾರ್ಯವನ್ನು ಪಾಲಕರು ಮಾಡಬೇಕು ಎಂದರು.

ವೇದಿಕೆಯ ಅಧ್ಯಕ್ಷ ಮಹದೇವಪ್ಪ ಚಕ್ರಸಾಲಿ ಅಧ್ಯಕ್ಷತೆ ವಹಿಸಿದ್ದರು. ದಿ ಯೂನಿಕ್ ಶಾಲೆಯ ಮುಖ್ಯೋಪಾಧ್ಯಾಯ ಅರವಿಂದ ದೇಶಪಾಂಡೆ, ರೇಲ್ವೆ ಇಲಾಖೆಯ ಶಶಿಧರ ರೊಳ್ಳಿ, ಹೆಚ್.ಎಸ್. ಕಿರಣ, ಶಿಕ್ಷಕರಾದ ಸರೋಜಾ ಗೌಡರ, ನಯನಾ ದಳವಾಯಿ, ವಿಜಯ ಕುಂಬಾರ ಇದ್ದರು. ನವೀನ ಹಿರೇಮಠ, ಧನ್ಯಾ ಹಿರೇಮಠ ನಿರೂಪಿಸಿದರು. ಬಳಿಕ ವಿದ್ಯಾರ್ಥಿನಿಯರಿಂದ ಪ್ರದರ್ಶನಗೊಂಡ ಭರತನಾಟ್ಯ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

> ವೇದಿಕಾ ಭರತನಾಟ್ಯ ಶಾಲೆಯ ಮುಖ್ಯಸ್ಥರಾದ ವಿದುಷಿ ಡಾ.ಹೇಮಾ ವಾಘಮೋಡೆ ಸನ್ಮಾನ ಸ್ವೀಕರಿಸಿ ಮಾತನಾಡಿ, ಭರತನಾಟ್ಯ ಮಕ್ಕಳಲ್ಲಿ ದೈವಿಕತೆಯನ್ನು ಅಭಿವ್ಯಕ್ತಗೊಳಿಸುತ್ತದೆ. ಮಕ್ಕಳಲ್ಲಿ ವಿಶೇಷವಾದ ಕಲಾ ಪ್ರೌಢಿಮೆ, ಆರೋಗ್ಯ, ಏಕಾಗ್ರತೆ, ಶಿಸ್ತು ಮತ್ತು ಬದುಕಿನ ಮೌಲ್ಯಗಳನ್ನು ಕಲಿಸಿ ಸುಂದರ ಬದುಕಿಗೆ ಪ್ರೇರೇಪಿಸುತ್ತದೆ. ಮಹಾನಗರಗಳಲ್ಲಿ ಸಿಗುವ ಭರತನಾಟ್ಯ ಶಿಕ್ಷಣ ಗ್ರಾಮೀಣ ಪ್ರದೇಶದ ಮಕ್ಕಳಿಗೂ ಸಿಗುವಂತಾಗಬೇಕು ಎಂಬ ನಿಟ್ಟಿನಲ್ಲಿ ವೇದಿಕಾ ಭರತನಾಟ್ಯ ಶಾಲೆ ಕಾರ್ಯೋನ್ಮುಖವಾಗಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka